ಸಂಪುಟ : ೯ ಸಂಚಿಕೆ ೧೫೬ ಪುಟ : ೪ ಬೆಲೆ: ೩.೦೦ ಶುಕ್ರವಾರ ಜುಲೈ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 156 Pages : 4 Price : 3.00 Friday July 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಬೆಣ್ಣೆಹಳ್ಳ, ಮಲಪ್ರಭಾ ನದಿಯ ಹರಿವಿನ ಗ್ರಾಮಗಳಲ್ಲಿ ಕಟ್ಟೆಚ್ಚರಕ್ಕೆ ಜಿಲ್ಲಾಧಿಕಾರಿ ಸೂಚನೆ

# ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಬೆಣ್ಣೆಹಳ್ಳ ಹಾಗೂ ಮಲಪ್ರಭಾ ನದಿಯ ಪ್ರವಾಹಕ್ಕೊಳಗಾಗುವ ಗ್ರಾಮಗಳ ಸಾರ್ವಜನಿಕರ ಸುರಕ್ಷತೆಗೆ ಸ್ಥಳೀಯ ಅಧಿಕಾರಿಗಳು ಪ್ರಥಮಾದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ವಿಡಿಯೋ ಸಭಾಂಗಣದಲ್ಲಿ ಗುರುವಾರ ಬೆಣ್ಣೆಹಳ್ಳ ಹಾಗೂ ಮಲಪ್ರಭಾ ನದಿಯ ಪ್ರವಾಹದಿಂದ ತೊಂದರೆಗೊಳಗಾಗುವ ಗ್ರಾಮಗಳ ಸುರಕ್ಷತೆ ಕುರಿತಂತೆ ನರಗುಂದ ಹಾಗೂ ರೋಣ ತಾಲೂಕಾ ಆಡಳಿತದೊಂದಿಗೆ ಪ್ರವಾಹ ಪರಿಸ್ಥಿತಿ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2009 ಹಾಗೂ 2019ರಲ್ಲಿ ಅಧಿಕ ಪ್ರಮಾಣದ ಪ್ರವಾಹ ಪರಿಸ್ಥಿತಿ ಎದುರಾಗಿತ್ತು. ಆ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಿದ ಅನೇಕ ಅಧಿಕಾರಿಗಳು ಅನುಭವ ಹೊಂದಿದವರಾಗಿದ್ದಾರೆ. ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕೆಂದು ಸೂಚಿಸಿದರು.

ನವಲಗುಂದ ಸೇರಿದಂತೆ 5 ತಾಲೂಕುಗಳ ಮಳೆಯಿಂದ ಅಪಾರ ಪ್ರಮಾಣದ ನೀರು ಬೆಣ್ಣೆಹಳ್ಳ ತಲುಪಿ ಅಲ್ಲಿಂದ ಜಿಲ್ಲೆಗೆ ಒಮ್ಮೆಲೇ ನೀರು ಹರಿದು ಬರಲಿದೆ. ಇದರಿಂದ ನರಗುಂದ ಹಾಗೂ ರೋಣ ತಾಲೂಕಿನ ಹಲವು ಗ್ರಾಮಗಳು ಪ್ರವಾಹಕ್ಕೊಳಗಾಗುವ ಸಂಭವವಿದ್ದು, ಈಗಾಗಲೇ ತಾಲೂಕಾಡಳಿತ ಅಂತಹ ಗ್ರಾಮಗಳನ್ನು ಗುರುತಿಸಿದೆ. ನೀರಿನ ಪ್ರಮಾಣಕ್ಕನುಗುಣವಾಗಿ ಅಧಿಕಾರಿಗಳು ಪ್ರವಾಹ ಪರಿಸ್ಥಿತಿಯನ್ನು ಸರಿಯಾಗಿ ನಿಭಾಯಿಸಬೇಕು ಎಂದು ನಿರ್ದೇಶಿಸಿದರು.

ಪ್ರವಾಹ ಪರಿಸ್ಥಿತಿ ತಲೆದೋರಿದಲ್ಲಿ ಅಗ್ನಿಶಾಮಕ ಇಲಾಖೆ ತಂಡ ತಕ್ಷಣ ಕಾರ್ಯಪ್ರವೃತ್ತವಾಗಬೇಕು. ತಾಲೂಕಾ ಆಡಳಿತದೊಂದಿಗೆ ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯ ಸಾಧಿಸುವ ಮೂಲಕ ಪ್ರವಾಹ ಪರಿಸ್ಥಿತಿ ನಿರ್ವಹಣೆ ಮಾಡಬೇಕು. ತಗ್ಗುಪ್ರದೇಶಗಳಲ್ಲಿ ಹಾಗೂ ಶಿಥಿಲಾವಸ್ಥೆಯಲ್ಲಿರುವ ಮಣ್ಣಿನ ಮನೆಗಳಲ್ಲಿ ವಾಸಿಸುವವರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.

ಜಿ.ಪಂ. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ, ಪ್ರವಾಹ ಪರಿಸ್ಥಿತಿ ಸಮರ್ಥವಾಗಿ



ನಿಭಾಯಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ಅಗತ್ಯವಿದ್ದಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು. ಕಾಳಜಿ ಕೇಂದ್ರಗಳನ್ನು ಈಗಾಗಲೇ ಗುರುತಿಸಲಾಗಿದೆ. ಕಾಳಜಿ ಕೇಂದ್ರಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳು ಇರುವಂತೆ ಪರಿಶೀಲಿಸಬೇಕು. ಸಂದರ್ಭಾನುಸಾರ ಸಾರ್ವಜನಿಕರನ್ನು ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸುವಲ್ಲಿ ಆರೋಗ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿಭಾಯಿಸಬೇಕೆಂದು ಸೂಚಿಸಿದರು.

ನರಗುಂದ ಹಾಗೂ ರೋಣ ತಹಸೀಲ್ದಾರರಾದ ಶ್ರೀಶೈಲ ತಳವಾರ ಹಾಗೂ ನಾಗರಾಜ ಮಾತನಾಡಿ, ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಈಗಾಗಲೇ ಪೂರ್ವಸಿದ್ಧತೆ ಮಾಡಿಕೊಳ್ಳಲಾಗಿದೆ. ಸ್ಥಳೀಯ ಜೆಸಿಬಿ ಮಾಲೀಕರು, ನುರಿತ ಈಜುಗಾರರು, ತರಕಾರಿ ಹಾಗೂ ಕಿರಾಣಿ ಅಂಗಡಿ ಮಾಲೀಕರು ಹಾಗೂ ವೈದ್ಯರ ಮಾಹಿತಿಯನ್ನು ಸಂಗ್ರಹಿಸಲಾಗಿದೆ. ಅಲ್ಲದೇ ಜನ-ಜಾನುವಾರು ಸ್ಥಳಾಂತರಕ್ಕೆ ಸ್ಥಳ ಗುರುತಿಸಿಟ್ಟುಕೊಳ್ಳಲಾಗಿದೆ. ಮೊದಲು ಪ್ರವಾಹಕ್ಕೀಡಾಗುವ ಗ್ರಾಮಗಳ ಪಟ್ಟಿಯನ್ನು ಮಾಡಿಟ್ಟುಕೊಂಡಿದ್ದು, ಸಂದರ್ಭಕ್ಕನುಸಾರವಾಗಿ ಸಮರ್ಪಕವಾಗಿ ಪ್ರವಾಹ ನಿರ್ವಹಣೆಗೆ ಕ್ರಮ ವಹಿಸಲಾಗುವುದು ಎಂದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಡಿಡಿಎಲ್‌ಆರ್ ರುದ್ರಗೌಡ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ಅಗ್ನಿಶಾಮಕ ಇಲಾಖೆ ಅಧಿಕಾರಿ ವಿ.ಎಸ್. ತಕ್ಕೇಕರ್, ವಿಪತ್ತು ನಿರ್ವಹಣಾ ಪರಿಣಿತ ಶಿವಾನಂದ ರಾಜನಾಳ ಸೇರಿದಂತೆ ತಾಲೂಕಾ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ನರಗುಂದ ಹಾಗೂ ರೋಣ ತಾಲೂಕುಗಳ ಪೊಲೀಸ್ ಅಧಿಕಾರಿಗಳು ಬೀಟ್ ಮಾಡುವ ಮೂಲಕ ಪ್ರವಾಹ ಕುರಿತಂತೆ ಮಾಹಿತಿ ಸಂಗ್ರಹ ಮಾಡಿಟ್ಟುಕೊಳ್ಳಬೇಕು. ಅಲ್ಲದೇ ಪ್ರವಾಹ ಪರಿಸ್ಥಿತಿ ಎದುರಾದಲ್ಲಿ ಜನಸಾಮಾನ್ಯರು ನದಿ ಅಂಚಿನ ಕಡೆಗೆ ತೆರಳದಂತೆ ಬ್ಯಾರಿಕೇಡ್ ಹಾಕುವ ಮೂಲಕ ಮುಂಜಾಗ್ರತೆ ಕ್ರಮ ಕೈಗೊಳ್ಳಬೇಕು. ಯಾವುದೇ ಪ್ರಾಣಹಾನಿಗೆ ಅವಕಾಶ ನೀಡಬಾರದು ಎಂದರು.

ನವಿಲುತೀರ್ಥ ಡ್ಯಾಂ 37.731 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು, ಪ್ರಸ್ತುತ 24 ಟಿಎಂಸಿ ನೀರು ಸಂಗ್ರಹವಾಗಿದೆ. ಡ್ಯಾಮಿನ ನೀರಿನ ಒಳಹರಿವು 26 ಸಾವಿರ ಕ್ಯೂಸೆಕ್ ಇದ್ದು, ಶೀಘ್ರವೇ ನವಿಲುತೀರ್ಥ ಡ್ಯಾಮ್‌ನಿಂದ ನೀರು ಹೊರಬಿಡುವ ಸಾಧ್ಯತೆಯಿದೆ. ನವಿಲುತೀರ್ಥ ಡ್ಯಾಮಿನಿಂದ ಅಪಾರ ಪ್ರಮಾಣದ ನೀರು ಬಿಟ್ಟಲ್ಲಿ ಮುಂದಿನ 18 ಗಂಟೆಯೊಳಗಾಗಿ ನೀರು ಜಿಲ್ಲೆಗೆ ಪ್ರವೇಶ ಮಾಡಲಿದೆ. ಡ್ಯಾಂನಿಂದ ನೀರು ಹೊರಬಿಡುವ ಮಾಹಿತಿ ದೊರೆತ ತಕ್ಷಣ ತಾಲೂಕಾಡಳಿತಗಳು ಪ್ರವಾಹ ಪೀಡಿತಕ್ಕೊಳಗಾಗುವ ಗ್ರಾಮಗಳಲ್ಲಿ ಕಟ್ಟೆಚ್ಚರ ವಹಿಸುವ ಮೂಲಕ ಆಗುವ ಜೀವ ಹಾನಿ ತಪ್ಪಿಸಬೇಕು.

**– ಗೋವಿಂದರೆಡ್ಡಿ.**
**ಜಿಲ್ಲಾಧಿಕಾರಿಗಳು, ಗದಗ.**



## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜುಲೈ 26ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ:ವಾರ್ಡ್ ನಂ. 22 ಗಂಗಿಮಡಿ ಲಿಡ್ಕರ್ ಬಡಾವಣೆ, ಅಪಾರ್ಟ್‌ಮೆಂಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ಪಂಚಾಕ್ಷರಿ ನಗರ 2, 3, 5 ಕ್ರಾಸ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 34, 35 ಹುಡ್ಕೋ 1, 2, 3 ನೇ ಕ್ರಾಸ್, ಹನುಮಂತ ದೇವರ ಗುಡಿ ಲೈನ್, ಸೇವಾಲಾಲ್ ನಗರ, ಬಾಪೂಜಿನಗರ, ಶಿವಾನಂದ ಗಾರ್ಡನ್, ಆದರ್ಶ ನಗರ, ನೀಲಮ್ಮ ತಾಯಿ ಮಠದ ಲೈನ್, 9 ನಂ ಶಾಲೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 ನ್ಯಾವಳ್ಳಿಯವರ ಲೈನ್, ಪವಾರ ಲೈನ್, ಮಾಕಾಪುರ ಲೈನ್, ಮಳಲಿ ಪೂಜಾರ ಲೈನ್, ತಟ್ಟಿ ಅವರ ಲೈನ್, ಪಣಿಬಂದ್ ರವರ ಲೈನ್.

ವಾರ್ಡ್ ನಂ. 7 ಶಿವಾಜಿ ನಗರ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 11, 12 ನಿಸರ್ಗ ಬಡಾವಣೆ, ರಿಂಗ್ ರೋಡ್ ಶಿವಬಸವ ನಗರ, ಹನುಮಂತ ದೇವರ ಗುಡಿ, ಕಾಶಿ ವಿಶ್ವನಾಥ ನಗರ, ಗಾಣಿಗೇರ ಲೈನ್, ಭಟ್ಟರ ಲೈನ್, ನಾಗಪ್ಪನ ಕಟ್ಟಿ, ಕರಿಯಮ್ಮನ ಕಲ್ಲು ಪಾದಗಟ್ಟಿ, ರಾಘವೇಂದ್ರ ಗುಡಿ ಲೈನ್, ಮಾಳೆಕೊಪ್ಪ ಲೈನ್, ಸಾಯಿಬಾಬಾ ಗುಡಿ, ಪಿ ಅಂಡ್ ಟಿ ಕ್ವಾರ್ಟರ್ಸ್, ಚರ್ಚ್ ಭಾಗಗಳು, ಗಣಪತಿಗುಡಿ ಲೈನ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲರಿಗೆ ಸಂಸದ ಬಸವರಾಜ್ ಬೊಮ್ಮಾಯಿ ಮನವಿ

# ಮಹದಾಯಿ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಅನುಮತಿ ಕೊಡಿಸಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಳಸಾ-ಬಂಡೂರಿ ನಾಲಾ ಮಹದಾಯಿ ತಿರುವು ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿಯಿಂದ ಅನುಮತಿ ಕೊಡಿಸುವಂತೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಮನವಿ ಮಾಡಿದ್ದಾರೆ.

ನವದೆಹಲಿಯಲ್ಲಿ ಗುರುವಾರ ಸಂಸದ ಗೋವಿಂದ ಕಾರಜೋಳ ಅವರೊಂದಿಗೆ ಭೇಟಿ ಮಾಡಿ, ಕಳಸಾ ಬಂಡೂರಿ ನಾಲಾ ತಿರುವು ಯೋಜನೆ ಅಡಿ ಕರ್ನಾಟಕದ ಹುಬ್ಬಳ್ಳಿ-ಧಾರವಾಡ ಅವಳಿ ನಗರ ಸೇರಿದಂತೆ ಕುಂದಗೋಳ ಪಟ್ಟಣ ಮತ್ತು ಸುತ್ತಮುತ್ತಲಿನ ಗ್ರಾಮಗಳ ಕುಡಿಯುವ ನೀರು ಯೋಜನೆಗೆ 3.90 ಟಿಎಂಸಿ ನೀರು ಬಳಕೆಗೆ ಅನುಮತಿ ನೀಡಲಾಗಿದೆ.



ಕಳಸಾ ಬಂಡೂರಿ ನಾಲಾ ತಿರುವು ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ಕೇಂದ್ರ ಜಲ ಆಯೋಗ 2022ರ ಡಿಸೆಂಬರ್ 29 ರಂದು ಒಪ್ಪಿಕೊಂಡಿದೆ. ಅರಣ್ಯ ಇಲಾಖೆಯ ಒಪ್ಪಿಗೆಗಾಗಿ ಕಳಸಾ ನಾಲೆ ವ್ಯಾಪ್ತಿಯ 26.9225 ಹೆಕ್ಟೇರ್ ಅರಣ್ಯ ಪ್ರದೇಶ ಹಾಗೂ ಬಂಡೂರಾ ನಾಲೆ ವ್ಯಾಪ್ತಿಯ 24.50 ಹೆಕ್ಟೇರ್ ಅರಣ್ಯ ಪ್ರದೇಶದ ಅನುಮತಿಗಾಗಿ ಈಗಾಗಲೇ ಪರಿವೇಶ್ ಪೋರ್ಟಲ್ ಮೂಲಕ ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆಗೆ ಅನುಮತಿಗಾಗಿ ಮನವಿ ಸಲ್ಲಿಸಲಾಗಿದೆ. ಅಲ್ಲದೇ ಕಳಸಾ ನಾಲಾ ತಿರುವು ಯೋಜನೆ ಅನುಮತಿಗಾಗಿ ರಾಷ್ಟ್ರೀಯ ವನ್ಯಜೀವಿ ಮಂಡಳಿಗೆ ರಾಜ್ಯ ವನ್ಯಜೀವಿ ಮಂಡಳಿಯಿಂದ ಮನವಿ ಸಲ್ಲಿಸಲಾಗಿದೆ.

ಈ ವಿಷಯ 2024ರ ಜನವರಿ 30 ರಂದು ನಡೆದ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸಭೆಯಲ್ಲಿ ಚರ್ಚಿಸಿ ತಡೆ ಹಿಡಿಯಲಾಗಿದೆ. ದಯವಿಟ್ಟು ನಮ್ಮ ಮನವಿಯನ್ನು ಪರಿಗಣಿಸಿ ಯೋಜನೆ ಅನುಷ್ಠಾನಕ್ಕೆ ಅನುಮತಿ ಕೊಡಿಸಿಕೊಡುವಂತೆ ಮನವಿ ಮಾಡಿದ್ದಾರೆ.

## ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ರೋಟರಿ ವೆಲ್‌ಫೇರ್ ಸೊಸೈಟಿ ಹಾಗೂ ಇನ್ನರ್ ವ್ಹೀಲ್ ಸಂಸ್ಥೆಗಳ ಸಹಯೋಗದಲ್ಲಿ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಜಿಲ್ಲಾ ಕ್ರೀಡಾಂಗಣದ ಹತ್ತಿರದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಜುಲೈ 27ರಂದು ಏರ್ಪಡಿಸಲಾಗಿದೆ.

ಈ ಶಸ್ತ್ರ ಚಿಕಿತ್ಸಾ ಶಿಬಿರವನ್ನು, ಪ್ರೀತಿ ವಿಶ್ವನಾಥ ಶಿವಪ್ಪನಮಠ ಮತ್ತು ದಿ. ಉಷಾದೇವಿ ಗೋವಿಂದರಾಜ ಕುಷ್ಟಗಿ ಇವರ ಸ್ಮರಣಾರ್ಥ ರೊ. ನವೀನ ಗೋವಿಂದರಾಜ ಕುಷ್ಟಗಿ, ಗದಗ ಇವರ ಪ್ರಾಯೋಜಕತ್ವದಲ್ಲಿ ರೋಟರಿ ಉಚಿತ ಕಣ್ಣಿನ ಆಸ್ಪತ್ರೆ, ಜಿಲ್ಲಾ ಸ್ಟೇಡಿಯಂ ಹತ್ತಿರ, ಗದಗ ಇಲ್ಲಿ ಮುಂಜಾನೆ 10 ಗಂಟೆಗೆ ತಪಾಸಣೆ ಹಾಗೂ ಆಯ್ಕೆಯಾದ ರೋಗಿಗಳಿಗೆ ಜುಲೈ 28ರಂದು ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುವುದು. ತಪಾಸಣೆಗೆ ಬರುವ ರೋಗಿಗಳು ತಮ್ಮ ಆಧಾರ್ ಕಾರ್ಡಿನ ಝುರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು.ಬ್ಲಡ್ ಪ್ರೆಶರ್ ಹಾಗೂ ಸಕ್ಕರೆ ಕಾಯಿಲೆ ಇದ್ದವರಿಗೆ ಅವುಗಳು ನಿಯಂತ್ರಣಕ್ಕೆ ಬರದ ಹೊರತು ಆಪರೇಶನ್ ಮಾಡಲಾಗುವುದಿಲ್ಲ. ಕಣ್ಣಿನ ಪೊರೆ ಬಂದ ರೋಗಿಗಳು ತಮ್ಮ ಹೆಸರನ್ನು ರೋಟರಿ ಐ ಕೇರ್ ಸೆಂಟರ್‌ನಲ್ಲಿ (ಸ್ಟೇಡಿಯಂ ಹತ್ತಿರ) ನೋಂದಾಯಿಸಬೇಕೆಂದು ಸಂಸ್ಥೆಯ ಅಧ್ಯಕ್ಷ ರೊ. ಇಂ. ಶ್ರೀಧರ ಎನ್. ಸುಲ್ತಾನಪೂರ, ಕಾರ್ಯದರ್ಶಿ ರೊ. ಇಂ. ಬಾಲಕೃಷ್ಣ ಕಾಮತ, ಐ.ಒ.ಎಲ್. ಚೇರಮನ್ ರೊ. ಡಾ.ಶೇಖರ ಡಿ. ಸಜ್ಜನರ ಸಾರ್ವಜನಿಕರಲ್ಲಿ ವಿನಂತಿಸಿಕೊಂಡಿದ್ದಾರೆ.

### ವಿಧಾನಸೌಧದಲ್ಲಿ ಕನ್ನಡ ಕಾನೂನು ಪುಸ್ತಕಗಳನ್ನು ಬಿಡುಗಡೆಗೊಳಿಸಿದ ಸಚಿವ ಎಚ್.ಕೆ. ಪಾಟೀಲ್

# ಸತತ ಅಧ್ಯಯನದಿಂದ ಗೆಲುವು ಖಚಿತ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ ಆಡಳಿತ ಭಾಷೆ ಕನ್ನಡವಾಗಿದೆ. ಕರ್ನಾಟಕದ ಪ್ರತಿಯೊಂದು ಇಲಾಖೆಯಲ್ಲಿಯೂ ಕಡ್ಡಾಯವಾಗಿ ಕನ್ನಡದಲ್ಲಿಯೇ ವ್ಯವಹರಿಸಬೇಕಾಗುತ್ತದೆ. ಕೆಳಹಂತದ ನ್ಯಾಯಾಲಯದಿಂದ ಜಿಲ್ಲಾ ನ್ಯಾಯಾಲಯಗಳಲ್ಲಿ ಮತ್ತು ಉಚ್ಚ ನ್ಯಾಯಾಲಯಗಳಲ್ಲಿಯೂ ಸಹ ಜನ ಸಾಮಾನ್ಯರಿಗೆ ತಿಳಿಯುವಂತೆ ಕನ್ನಡದಲ್ಲಿಯೇ ವಿಚಾರಣೆಗೆ ಆದ್ಯತೆ ಇದೆ. ಪ್ರಾಚೀನ ಕಾಲದಿಂದಲೂ ನ್ಯಾಯ, ನೀತಿ ಹಾಗೂ ಧರ್ಮಗಳು ಭಾರತೀಯ ಜನ-ಜೀವನದ ಸಾಮಾಜಿಕ, ಆರ್ಥಿಕ, ಧಾರ್ಮಿಕ ರಂಗಗಳ ಅವಿಭಾಜ್ಯಗಳಾಗಿದ್ದು, ನ್ಯಾಯಾಲಯದಲ್ಲಿ ನ್ಯಾಯದಾನ ಪ್ರಕ್ರಿಯೆಯಿಂದ ಮಾತ್ರ ಸಾಮಾಜಿಕ ನ್ಯಾಯ ಸಿಗಲು ಸಾಧ್ಯ ಎಂದು ಕಾನೂನು ನ್ಯಾಯ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಡಾ. ಎಚ್.ಕೆ. ಪಾಟೀಲ



ಅಭಿಪ್ರಾಯಪಟ್ಟರು.

ಅವರು ಬೆಂಗಳೂರಿನ ಪ್ರತಿಷ್ಠಿತ ಕಾನೂನು ಪುಸ್ತಕಗಳ ಪ್ರಕಾಶಕರಾದ ಕರ್ನಾಟಕ ಲಾ ರಿಪೋರ್ಟರ್ಸ್ ಪಬ್ಲಿಕೇಷನ್, ಬಿಬಿಸಿ ಅವರಿಂದ ಯುವ ನ್ಯಾಯವಾದಿ ಎಸ್.ಕೆ. ನದಾಫ್ ಸಂಪಾದಿತ ಭಾರತೀಯ ನ್ಯಾಯ ಸಂಹಿತೆ 2023, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ 2023 ಕನ್ನಡ ಕಾನೂನು ಪುಸ್ತಕಗಳನ್ನು ಬೆಂಗಳೂರಿನ ವಿಧಾನಸೌಧದಲ್ಲಿ ಬಿಡುಗಡೆಗೊಳಿಸಿ ಮಾತನಾಡಿದರು.

ಯುವ ನ್ಯಾಯವಾದಿ ನದಾಫ್ ಅವರು ಮೂರು ಕಾನೂನು ಪುಸ್ತಕಗಳನ್ನು ಒಳಗೊಂಡ ಕ್ರಿಮಿನಲ್ ಮ್ಯಾನುವಲ್ ಮತ್ತು ಮೂರು ಪುಸ್ತಕಗಳು ಪ್ರತ್ಯೇಕವಾಗಿ ಕನ್ನಡದಲ್ಲಿ ಸಂಪಾದಿಸಿದ್ದು, ಸಂಪಾದಿತ ಕಾನೂನು ಪುಸ್ತಕಗಳು ಲೋಕಾರ್ಪಣೆ ಮಾಡುವ ಅವಕಾಶ ಸಿಕ್ಕಿದ್ದು ಸಂತಸ ತಂದಿದೆ. ಇಂದಿನ ಸಂಘರ್ಷದ ಕಂದಕಗಳನ್ನು ಮುಚ್ಚಿ ಯಶಸ್ಸಿನ ಹಾದಿಯಲ್ಲಿ ಸಾಗಲು ಕಾನೂನು ವಿದ್ಯಾರ್ಥಿಗಳಿಗೆ, ನ್ಯಾಯವಾದಿಗಳಿಗೆ, ನ್ಯಾಯಾಧೀಶರಿಗೆ, ಉಪನ್ಯಾಸಕರುಗಳಿಗೆ ಈ ಪುಸ್ತಕಗಳು ಉತ್ತಮ ಮಾರ್ಗದರ್ಶಿಯಾಗಿದೆ ಎಂದು ಹೇಳಿದರು.

ಲೇಖಕ, ನ್ಯಾಯವಾದಿ ಎಸ್.ಕೆ. ನದಾಫ್ ಮಾತನಾಡಿ, ಇಂದಿನ ದಿನಮಾನದಲ್ಲಿ ಕಾನೂನು ವಿದ್ಯಾರ್ಥಿಗಳಿಗೆ, ನ್ಯಾಯಾಧೀಶರುಗಳಿಗೆ, ನ್ಯಾಯವಾದಿಗಳಿಗೆ, ಉಪನ್ಯಾಸಕರುಗಳಿಗೆ ಮತ್ತು ಜನಸಾಮಾನ್ಯರಿಗೆ ಕನ್ನಡದಲ್ಲಿ ಕಾನೂನು ಪುಸ್ತಕಗಳ ಅವಶ್ಯಕತೆ ಹೆಚ್ಚಿದೆ. ಮುಖ್ಯವಾಗಿ ನನ್ನ ಮಾರ್ಗದರ್ಶಕರು ಹಾಗೂ ನಮ್ಮ ಮಾತೃ ಇಲಾಖೆಯ ಸಚಿವರಿಂದಲೇ ಈ ಪುಸ್ತಕ ಬಿಡುಗಡೆಯಾಗಿದ್ದು ನನ್ನ ಪಾಲಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕಾನೂನು ಇಲಾಖೆಯ ಪ್ರಧಾನ ಕಾರ್ಯದರ್ಶಿ ಜೆ.ಎಸ್. ಸಂಗ್ರೇಶಿ, ಕಾನೂನು ಸಚಿವರ ಆಪ್ತ ಕಾರ್ಯದರ್ಶಿ ಡಾ. ಶಿವಪುತ್ರ ಬಾಬುರಾವ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಟಿ.ಎಮ್. ಭಾಸ್ಕರ, ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣೆ ಸಂಸ್ಥೆಯ ಸಂಶೋಧನಾ ನಿರ್ದೇಶಕರಾದ ಸಿ.ಎಸ್. ಪಾಟೀಲ, ಸಚಿವರ ವಿಶೇಷ ಕರ್ತವ್ಯಾಧಿಕಾರಿ ಡಾ. ಲತಿಫ್ ಎಸ್.ಕುನ್ನಿಭಾವಿ, ಸಂಸ್ಥೆಯ ರಿಸರ್ಚ್-ಹೆಡ್ ಡಾ. ರೇವಯ್ಯ ಒಡೆಯರ ಇವರುಗಳು ನ್ಯಾಯವಾದಿ ಎಸ್.ಕೆ ನದಾಫ್ ಮತ್ತು ಪ್ರಕಾಶಕರಾದ ತ್ಯಾಗರಾಜರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಸಿ.ಟಿ. ಗುರುಪ್ರಸಾದ, ಸಹಾಯಕ ಕುಲಸಚಿವ ಶಹಜಹಾನ ಮುದುಕವಿ, ಬೆಂಗಳೂರಿನ ಕರ್ನಾಟಕ ಲಾ ರಿಪೋರ್ಟ್, ಬಿಬಿಸಿ ಪ್ರಕಾಶನದ ಪ್ರಕಾಶಕ ವಿ.ತ್ಯಾಗರಾಜ್, ನ್ಯಾಯವಾದಿ ಕುಶವಂತ ಕುಮಾರ್, ಲೇಖಕ ಎಸ್.ಕೆ. ನದಾಫ್, ಕಾನೂನು ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಬಹುತೇಕ ಕಾನೂನು ಪುಸ್ತಕಗಳು ಇಂಗ್ಲಿಷ್ ಭಾಷೆಯಲ್ಲಿಯೇ ಇರುತ್ತವೆ. ಇದರಿಂದ ಜನ ಸಾಮಾನ್ಯರಿಗೆ ಕಾನೂನು ಬಗ್ಗೆ ತಿಳಿದುಕೊಳ್ಳುವುದು ಕಷ್ಟವಾಗುತ್ತದೆ. ಈ ನಿಟ್ಟಿನಲ್ಲಿ ನಮ್ಮ ಕನ್ನಡ ಭಾಷೆಯಲ್ಲಿಯೇ ಕನ್ನಡ ಪುಸ್ತಕಗಳು ಮುದ್ರಣವಾಗಬೇಕು. ಈ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ನಿಮ್ಮೊಂದಿಗೆ ಇರುತ್ತದೆ ಎಂದು ಪ್ರತಿಷ್ಠಿತ ಕಾನೂನು ಪುಸ್ತಕಗಳ ಪ್ರಕಾಶಕರಾದ ಕರ್ನಾಟಕ ಲಾ ರಿಪೋರ್ಟರ್ಸ್ ಪಬ್ಲಿಕೇಷನ್, ಬಿಬಿಸಿಯ ಮುಖ್ಯಸ್ಥರಾದ ತ್ಯಾಗರಾಜ ಮತ್ತು ನ್ಯಾಯವಾದಿ ಎಸ್.ಕೆ. ನದಾಫ್‌ರಿಗೆ ಸಚಿವ ಎಚ್.ಕೆ. ಪಾಟೀಲ ಶುಭ ಹಾರೈಸಿದರು.

**ಜನನ ಮತ್ತು ಮರಣ ನೋಂದಣಿ ಪದ್ಧತಿ ಕುರಿತು ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಎಚ್ಚರಿಕೆ**

# ಜನನ, ಮರಣ ನೋಂದಣಿ ಪ್ರಕ್ರಿಯೆ ವಿಳಂಬ ಸಲ್ಲದು



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ಯಾವುದೇ ಕಾರಣಕ್ಕೂ ವಿಳಂಬವಾಗಬಾರದು ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಕೆಸ್ವಾನ್ ಹಾಲ್‌ನಲ್ಲಿ ಗುರುವಾರ ಜನನ ಮತ್ತು ಮರಣ ನೋಂದಣಿ ಪದ್ಧತಿ ಕುರಿತು ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯಲ್ಲಿ ಸರಿಯಾಗಿ ಮಾಹಿತಿದಾರರ ಹೆಸರು ಮತ್ತು ಸಹಿಯನ್ನು ಸಂಗ್ರಹಿಸಿತಕ್ಕದ್ದು ಮತ್ತು ಅರ್ಜಿದಾರರ ಶುಲ್ಕವನ್ನು ನಿಯಮಿತವಾಗಿ ಸರಕಾರಕ್ಕೆ ವಿಳಂಬ ಮಾಡದೇ ಜಮೆ ಮಾಡಬೇಕು ಎಂದರು.

ಕಾನೂನು ವರದಿಗಳಲ್ಲಿ ನೋಂದಣಿ ಸಂಖ್ಯೆ ಮತ್ತು ನೋಂದಣಿ ದಿನಾಂಕ ನಮೂದುಗೊಳ್ಳುವಂತೆ ಕ್ರಮವಹಿಸಬೇಕು, ನೋಂದಣಿ ಪ್ರಮಾಣ ಪತ್ರದಲ್ಲಿ ನೋಂದಣಾಧಿಕಾರಿಗಳ ರುಜು ಕಡ್ಡಾಯವಾಗಿರಬೇಕು ಹಾಗೂ ತಾಲೂಕ ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳು ಕಡ್ಡಾಯವಾಗಿ ಜರುಗಿಬೇಕು ಎಂದು ಸೂಚಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ನೋಂದಣಿ ಪ್ರಮಾಣ ಪತ್ರದಲ್ಲಿ ಡ್ಯೂಟಿ ಡಾಕ್ಟರ್ ರುಜುಗಳು ಆಗದಂತೆ ಎಚ್ಚರ ವಹಿಸಬೇಕು. ಪ್ರಾಧಿಕಾರದ ಅನುಮತಿಯಿಲ್ಲದೆ ನೋಂದಣಿ ಪ್ರಕ್ರಿಯೆಲ್ಲಿ ವಿಳಂಬವಾಗಬಾರದು. ಸರ್ಕಾರಕ್ಕೆ ಹಣ ಜಮೆ ಮಾಡಿದ ಚಲನ್ ಪ್ರತಿಗಳನ್ನು ಈ ಜನ್ಮ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಬೇಕು ಮತ್ತು 2019 ರಿಂದ 2022ನೇ ಸಾಲಿನ ಕಾನೂನು ಭಾಗಗಳು ಸಂರಕ್ಷಣಾಧಿಕಾರಿಗಳಿಗೆ ಹಸ್ತಾಂತರಿಸಬೇಕು ಎಂದು ಮಾಹಿತಿ ನೀಡಿದರು.

ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ವಿಭಾಗದ ಮಾಹಿತಿಯನ್ನು ಸಭೆಗೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ವಾರ್ತಾಧಿಕಾರಿ ವಸಂತ ಮಡ್ಲೂರ, ಎಲ್ಲಾ ತಾಲೂಕಿನ ತಹಸೀಲ್ದಾರರು, ಪುರಸಭೆಯ ಮುಖ್ಯಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಹಾಜರಿದ್ದರು.

# ಕನ್ನಡಿಗರಿಗೆ ಉದ್ಯೋಗ ಮೀಸಲು ಮಸೂದೆ ಪ್ರಶ್ನಿಸಿ ಹೈಕೋರ್ಟ್‌ಗೆ ಪಿಐಎಲ್ ಸಲ್ಲಿಕೆ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೈಗಾರಿಕೆ, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳಲ್ಲಿ ರಾಜ್ಯದ ಸ್ಥಳೀಯ ಅಭ್ಯರ್ಥಿಗಳಿಗೆ ಉದ್ಯೋಗ ಮೀಸಲಾತಿ ಕಲ್ಪಿಸುವ ಮಸೂದೆಯನ್ನು ಪ್ರಶ್ನಿಸಿ ಕರ್ನಾಟಕ ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್) ಸಲ್ಲಿಕೆಯಾಗಿದೆ. ಈ ಅರ್ಜಿಯ ವಿಚಾರಣೆ ಆಗಸ್ಟ್ 7ಕ್ಕೆ ನಿಗದಿಯಾಗಿದೆ ಎಂದು ಬಾರ್ & ಬೆಂಚ್ ವರದಿ ಮಾಡಿದೆ.

ಬೆಂಗಳೂರಿನ ಬಿಲೇಕಹಳ್ಳಿಯ ಸೋಮೇಶ್ವರ ಲೇಔಟ್‌ನ ಲೆಕ್ಕ ಪರಿಶೋಧಕಿ ಆರ್ ಅಮೃತಲಕ್ಷ್ಮಿ ಎಂಬವರು ಸಲ್ಲಿಸಿರುವ ಅರ್ಜಿಯನ್ನು ವಿಚಾರಣೆಗೆ ಕೈಗೆತ್ತಿಕೊಳ್ಳುವಂತೆ ಕೋರಿ ಅವರ ಪರ ವಕೀಲರು ಬುಧವಾರ ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ ವಿ ಅರವಿಂದ್ ನೇತೃತ್ವದ ವಿಭಾಗೀಯ ಪೀಠಕ್ಕೆ ಮನವಿ ಮಾಡಿದರು. ಇದಕ್ಕೆ ಪೀಠವು ಆಗಸ್ಟ್ 7ಕ್ಕೆ ಅರ್ಜಿ ವಿಚಾರಣೆ ಕೈಗೆತ್ತಿಕೊಳ್ಳುವುದಾಗಿ ತಿಳಿಸಿದೆ.

ರಾಜ್ಯ ಸರ್ಕಾರ ಜಾರಿಗೆ ತರಲು ಉದ್ದೇಶಿಸಿರುವ ಮಸೂದೆಯು ಸಂವಿಧಾದ 19 (1) (ಡಿ), 19 (1)(ಇ), 19 (1)(ಜಿ) ಮತ್ತು 14ನೇ ವಿಧಿಗಳಿಗೆ ವಿರುದ್ಧವಾಗಿದೆ. ಈ ಮಸೂದೆ ಅನುಷ್ಠಾನಗೊಂಡಲ್ಲಿ ಇದರಿಂದ ಸಹಜ ನ್ಯಾಯತತ್ವಗಳ ಉಲ್ಲಂಘನೆಯಾಗುತ್ತದೆ. ಅಂತೆಯೇ, ಈ ಕಾಯಿದೆಯನ್ನು ಜಾರಿಗೊಳಿಸುವ ಸಾಮರ್ಥ್ಯವನ್ನು ರಾಜ್ಯ ಶಾಸಕಾಂಗ ಹೊಂದಿಲ್ಲ ಎಂಬುವುದಾಗಿ ಅರ್ಜಿದಾರರು ಆಕ್ಷೇಪಿಸಿದ್ದಾರೆ ಎಂದು ತಿಳಿದು ಬಂದಿದೆ.

ಒಂದು ವೇಳೆ ಈ ಮಸೂದೆ ಜಾರಿಗೆ ಬಂದಲ್ಲಿ ರಾಜ್ಯದ ಕೈಗಾರಿಕಾ ವಲಯದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತದೆ. ಹಲವು ಸಾಂವಿಧಾನಿಕ ಪ್ರಶ್ನೆಗಳಿಗೆ ಎಡೆಮಾಡಿಕೊಡುತ್ತದೆ. ಅಂತೆಯೇ, ಕೆಟ್ಟ ಪರಂಪರೆಗೂ ನಾಂದಿ ಹಾಡಿದಂತಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿರುವ ಅರ್ಜಿದಾರರು, ಉದ್ದೇಶಿತ ಮಸೂದೆಯನ್ನು ಹಿಂಪಡೆಯುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಕೋರಿದ್ದಾರೆ ಎಂದು ವರದಿ ಹೇಳಿದೆ.

ಅರ್ಜಿಯಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಮಿಕ ಇಲಾಖೆ ಪ್ರಧಾನ ಕಾರ್ಯದರ್ಶಿಯನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ.

# ನಿರಾಶೆ ಮೂಡಿಸಿದ ಬಜೆಟ್



■ವಿಜಯಸಾಕ್ಷಿ ಸುದ್ದಿ, ಗದಗ

ನಿರುದ್ಯೋಗ, ಬಡತನ ನಿರ್ಮೂಲನೆಯಂತಹ ಆದ್ಯತಾ ವಲಯಗಳ ಕಡೆಗೆ ಸ್ವಲ್ಪವೂ ಗಮನ ಕೊಡದೆ ಕೇಂದ್ರ ಸರ್ಕಾರದ ಬಜೆಟ್ ನಿರಾಶೆ ಮೂಡಿಸಿದೆ. ದೇಶದ ಮಾನವ ಸಂಪನ್ಮೂಲದ ಸದ್ಬಳಕೆಗೆ ಯಾವುದೇ ರೀತಿಯ ಯೋಜನೆ ರೂಪಿಸದೆ ಕೇವಲ ಅಂಕಿ ಅಂಶಗಳ ಮೂಲಕ ಗೊಂದಲದ ನಿರಾಶೆ ಮೂಡಿಸಿದ ಬಜೆಟ್ ಇದಾಗಿದೆ ಎಂದು ಯುವ ಕಾಂಗ್ರೆಸ್ ಸಮಿತಿಯ ಗದಗ-ಬೆಟಗೇರಿ ಶಹರ ಉಪಾಧ್ಯಕ್ಷ ಅನ್ವರಬಾಷಾ ಕೆ. ನದಾಫ್ ಅಭಿಪ್ರಾಯಪಟ್ಟಿದ್ದಾರೆ.

**ಜುಲೈ 26, ಕಾರ್ಗಿಲ್ ವಿಜಯ ದಿವಸ್ ನಿಮಿತ್ತ ಲೇಖನ**

# ಕಾರ್ಗಿಲ್ ಹುತಾತ್ಮರಿಗೊಂದು ನಮನ




ಭಾರತೀಯರು ಎಂದೂ ಮರೆಯದ ಅವಿಸ್ಮರಣೀಯ ದಿನಗಳಲ್ಲಿ ಜುಲೈ 26 ಕೂಡಾ ಒಂದು. ಕಾರ್ಗಿಲ್ ಯುದ್ಧ ಭಾರತೀಯ ಪ್ರತಿಯೊಬ್ಬ ಪ್ರಜೆಯ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿದೆ. ಜಮ್ಮು ಕಾಶ್ಮೀರದ ಕಾರ್ಗಿಲ್‌ನಲ್ಲಿ ನಡೆದ ಈ ಯುದ್ಧದಲ್ಲಿ ಪಾಕಿಸ್ತಾನವನ್ನು ನಮ್ಮ ಭಾರತದ ವೀರಯೋಧರು ಸದೆಬಡಿದು ಅವರು ಆಕ್ರಮಿಸಿಕೊಂಡಿದ್ದ ಸ್ಥಳವನ್ನು ವಶಕ್ಕೆ ಪಡೆದ ದಿನವಾಗಿದೆ. ಪ್ರತಿ ವರ್ಷ ಜುಲೈ 26ರಂದು ಕಾರ್ಗಿಲ್ ವಿಜಯ ದಿವಸ್ ಆಚರಿಸಲಾಗುತ್ತದೆ.

ಅಕ್ರಮವಾಗಿ ಭಾರತಕ್ಕೆ ನುಸುಳುತ್ತಿದ್ದ ಪಾಕಿಸ್ತಾನಿ ಸೈನಿಕರ ಮೇಲೆ ಭಾರತೀಯ ಸೈನಿಕರು ಗಳಿಸಿದ ವಿಜಯದ ಸ್ಮರಣಾರ್ಥ ಜುಲೈ 26ರಂದು ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಗುತ್ತದೆ. 1999ನೇ ಇಸವಿಯ ಜುಲೈ 26ರಂದು ಭಾರತೀಯ ಸೈನಿಕರು ಆಪರೇಶನ್ ವಿಜಯ್ ಮೂಲಕ ಕಾರ್ಗಿಲ್-ಡ್ರಾಸ್ ವಲಯದಲ್ಲಿ ಪ್ರದರ್ಶಿಸಿದ ಶೌರ್ಯದ ನೆನಪಿಗಾಗಿ ಈ ದಿನವನ್ನು ಕಾರ್ಗಿಲ್ ವಿಜಯ ದಿವಸ್ ಎಂದು ಆಚರಿಸಲಾಗುತ್ತದೆ.

1999 ಮೇ ತಿಂಗಳಿನಲ್ಲಿ ಆರಂಭವಾದ ಕಾರ್ಗಿಲ್ ಯುದ್ಧ ಜುಲೈ ಅಂತ್ಯದ ತನಕ ಅಂದರೆ ಸುಮಾರು ಎರಡು ತಿಂಗಳ ಕಾಲ ನಡೆಯಿತು. ಈ ಯುದ್ಧದಲ್ಲಿ ಲೇಹ್ ಹೆದ್ದಾರಿಯವರೆಗೆ ನುಗ್ಗಿ ಬಂದಿದ್ದ ಪಾಕ್ ಸೇನೆಯನ್ನು ಭಾರತೀಯ ಸೇನೆ ಯಶಸ್ವಿಯಾಗಿ ಹಿಮ್ಮೆಟ್ಟಿಸಿತ್ತು. ಈ ಯುದ್ಧದಲ್ಲಿ ಭಾರತೀಯ ಸೇನೆಯ ಅಧಿಕಾರಿಗಳು ಸೇರಿದಂತೆ ಸುಮಾರು 527 ಭಾರತೀಯ ಯೋಧರು ಹುತಾತ್ಮರಾದರು.

ಕಾರ್ಗಿಲ್ ಪ್ರದೇಶದಲ್ಲಿ ಭಾರತ ಮತ್ತು ಪಾಕಿಸ್ತಾನದ ಲೈನ್ ಆಫ್ ಕಂಟ್ರೋಲ್ (ಎಲ್‌ಒಸಿ) ಇದೆ. ಈ ಪ್ರದೇಶದಲ್ಲಿ ಚಳಿಗಾಲದಲ್ಲಿ ಮೈನಸ್ ಡಿಗ್ರಿ ಸೆಲ್ಸಿಯಸ್‌ಗೆ ಇಳಿಯುತ್ತದೆ. ಇದರಿಂದ ಇಲ್ಲಿ ಗಡಿ ಕಾಯುವುದು ಭಾರತಕ್ಕೆ ಸವಾಲಿನ ಕೆಲಸ. ಚಳಿಗಾಲದಲ್ಲಿ ಭಾರತೀಯ ಮತ್ತು ಪಾಕ್ ಸೈನಿಕರು ಇಲ್ಲಿಂದ ಸ್ಥಳಾಂತರಗೊಳ್ಳುತ್ತಾರೆ.

ಚಳಿಗಾಲ ಮುಗಿದ ಬಳಿಕ ಇಲ್ಲಿಗೆ ಮತ್ತೆ ಗಡಿಕಾಯುವುದಕ್ಕೆ ಹೋಗುವುದು ಹಿಂದಿನಿಂದ ನಡೆದುಕೊಂಡು ಬಂದ ಪದ್ಧತಿಯಾಗಿತ್ತು. 1999ರಲ್ಲಿ ಈ ಸಂದರ್ಭವನ್ನೇ ಬಳಸಿಕೊಂಡ ಪಾಕಿಸ್ತಾನ, ಕಾಶ್ಮೀರದ ಹೋರಾಟಗಾರರ ಹೆಸರಿನಲ್ಲಿ ಪಾಕ್ ಸೈನಿಕರು, ಭಾರತದ ಪ್ರಮುಖ ಭಾಗಗಳನ್ನು ತನ್ನ ವಶಕ್ಕೆ ಪಡೆದುಕೊಂಡಿತು.

ಆಕ್ರಮಣದ ಮನಸ್ಥಿತಿಯಲ್ಲಿದ್ದ ಪಾಕ್‌ನ ಸೇನೆ, ಭಾರತದ ಯೋಧರನ್ನು ಚಿತ್ರಹಿಂಸೆ ನೀಡಿ ಕೊಂದರು. ಇದನ್ನು ಗಂಭೀರವಾಗಿ ಪರಿಗಣಿಸಿದ ಭಾರತ, ತಕ್ಷಣವೇ ಪಾಕಿಸ್ತಾನಕ್ಕೆ ಪ್ರತ್ಯುತ್ತರ ನೀಡಲು ನಿರ್ಧರಿಸಿತು. ಇದಕ್ಕಾಗಿ ಸೇನೆಯನ್ನು ಸಿದ್ಧಗೊಳಿಸಿತು. ಭಾರತ ಸರ್ಕಾರ 20 ಸಾವಿರ ಭಾರತೀಯ ಸೈನಿಕರನ್ನ ಸಜ್ಜುಗೊಳಿಸಿ ಮೇ 3ರಿಂದ ಆಪರೇಷನ್ ವಿಜಯ ಹೆಸರಿನಲ್ಲಿ ಕಾರ್ಯಾಚರಣೆ ಆರಂಭ ಮಾಡಿತು.

ಆ ನಂತರ ಆಪರೇಷನ್ ಸಫೇದ್ ಸಾಗರ್ ಎಂಬ ಸಂಕೇತ ನಾಮದಿಂದ ಕಾರ್ಯಾಚರಣೆ ಪ್ರಾರಂಭಿಸಿದ ಭಾರತೀಯ ಸೇನೆ, ಪಾಕಿಸ್ತಾನದ ಸೈನಿಕರ ಮೇಲೆ ದಾಳಿ ಮಾಡಲು ಇಂಡಿಯನ್ ಮಿಗ್ -21, ಮಿಗ್-27 ಮತ್ತು ಮಿರಾಜ್ 2000 ನಂತಹ ಯುದ್ಧ ವಿಮಾನಗಳನ್ನು ಬಳಸಿತು. ಪಾಕ್ ಶತ್ರುಗಳನ್ನು ನಿರ್ಮೂಲನೆ ಮಾಡಲು ಐಎಎಫ್ ಯೋಧರು ಈ ವಿಮಾನಗಳಿಂದ ರಾಕೆಟ್ ಮತ್ತು ಕ್ಷಿಪಣಿಗಳನ್ನು ಹಾರಿಸಿದರು.

ತೈಲ ಮತ್ತು ಇಂಧನ ಪೂರೈಕೆಯನ್ನು ನಿಲ್ಲಿಸಲು ಯುದ್ಧದ ಸಮಯದಲ್ಲಿ ಪಾಕಿಸ್ತಾನದ ಬಂದರುಗಳನ್ನು ನಿರ್ಬಂಧಿಸಲು ಭಾರತೀಯ ನೌಕಾಪಡೆ 'ಆಪರೇಷನ್ ತಲ್ವಾರ್' ಅನ್ನು ಪ್ರಾರಂಭಿಸಿತು. ಇದರಿಂದಾಗಿ ಪಾಕಿಸ್ತಾನೀಯರ ಸೇನೆಯನ್ನು ಹಿಮ್ಮೆಟ್ಟಿಸುವಲ್ಲಿ ಭಾರತ ಯಶಸ್ವಿಯಾಯಿತು. ಪಾಕಿಸ್ತಾನಿಗಳನ್ನು ಬಗ್ಗು ಬಡಿದ ಭಾರತೀಯ ಸೈನಿಕರು, ಜುಲೈ 24ರಂದು ಪಾಕಿಗಳನ್ನು ಹಿಮ್ಮೆಟ್ಟಿಸಿ ಭಾರತ ಯುದ್ಧ ಗೆದ್ದಿತು. ಇದಾದ ಬಳಿಕ ಪ್ರತೀ ವರ್ಷ ಜುಲೈ 26ರಂದು ಕಾರ್ಗಿಲ್ ವಿಜಯ ದಿವಸ್ ಅನ್ನು ಆಚರಣೆ ಮಾಡಲಾಗುತ್ತದೆ.



**– ಎಚ್.ಆರ್ ವಸ್ತ್ರದ್,**
ಧಾರವಾಡ.

## ಯುದ್ಧದ ಹಿಂದಿನ ಕಥೆ

1971ರ ಭಾರತ-ಪಾಕ್ ಯುದ್ಧದ ನಂತರ ಅನೇಕ ಮಿಲಿಟರಿ ಸಂಘರ್ಷಗಳು ನಡೆದಿವೆ. ಎರಡೂ ದೇಶಗಳು 1998ರಲ್ಲಿ ಪರಮಾಣು ಪರೀಕ್ಷೆಗಳನ್ನು ನಡೆಸಿದವು. ಇದು ಉದ್ವಿಗ್ನತೆಯನ್ನು ಮತ್ತಷ್ಟು ಹೆಚ್ಚಿಸಿತು. ಫೆಬ್ರವರಿ 1999ರಲ್ಲಿ ಪರಿಸ್ಥಿತಿಯನ್ನು ಶಾಂತಗೊಳಿಸಲು, ಕಾಶ್ಮೀರ ಸಂಘರ್ಷಕ್ಕೆ ಶಾಂತಿಯುತ ಮತ್ತು ದ್ವಿಪಕ್ಷೀಯ ಪರಿಹಾರವನ್ನು ಒದಗಿಸುವ ಭರವಸೆಯೊಂದಿಗೆ ಎರಡು ದೇಶಗಳು ಲಾಹೋರ್ ಘೋಷಣೆಗೆ ಸಹಿ ಹಾಕಿದವು.

ಪಾಕಿಸ್ತಾನಿ ಸಶಸ್ತ್ರ ಪಡೆಗಳು ಮತ್ತು ಅರೆಸೈನಿಕ ಪಡೆಗಳ ಗಡಿ ನಿಯಂತ್ರಣ ರೇಖೆಯ ಮೂಲಕ ಭಾರತದ ಭಾಗದಲ್ಲಿರುವ ಭೂಪ್ರದೇಶದೊಳಗೆ ನುಸುಳುವಿಕೆಯನ್ನು "ಆಪರೇಷನ್ ಬದ್ರ್" ಎಂದು ಕೋಡ್-ಹೆಸರು ಮಾಡಲಾಯಿತು. ಕಾಶ್ಮೀರ ಮತ್ತು ಲಡಾಖ್ ನಡುವಿನ ಸಂಪರ್ಕವನ್ನು ಮುರಿಯುವುದು ಮತ್ತು ಸಿಯಾಚಿನ್ ಗ್ಲೇಸಿಯರ್‌ನಿಂದ ಭಾರತೀಯ ಸೇನೆಯನ್ನು ಹಿಂಪಡೆಯುವುದು ಇದರ ಮುಖ್ಯ ಉದ್ದೇಶವಾಗಿತ್ತು.

## ಕಾರ್ಗಿಲ್ ಎಲ್ಲಿದೆ?

ಕಾಶ್ಮೀರದಲ್ಲಿರುವ ಕಾರ್ಗಿಲ್ ಹಿಮಾಲಯದ ಬೆಟ್ಟಗುಡ್ಡಗಳಿಂದ ಆವೃತವಾದ ಪ್ರದೇಶ. ಕಾರ್ಗಿಲ್ ಕಾಶ್ಮೀರದ ರಾಜಧಾನಿ ಶ್ರೀನಗರದಿಂದ 205 ಕಿ.ಮೀ. ದೂರದಲ್ಲಿದೆ. ಲೇಹ್ ಮತ್ತು ಶ್ರೀನಗರವನ್ನು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ 1 ಕಾರ್ಗಿಲ್ ಮೂಲಕ ಹಾದು ಹೋಗುತ್ತದೆ. ಈ ಪ್ರದೇಶದಲ್ಲಿ ಇರುವ ಏಕೈಕ ಹೆದ್ದಾರಿ ಇದಾಗಿದೆ. ಅಲ್ಲದೆ ವಿಶ್ವದ ಅತ್ಯಂತ ಎತ್ತರದಲ್ಲಿರುವ ಯುದ್ಧ ಭೂಮಿ ಸಿಯಾಚಿನ್‌ಗೂ ಸಂಪರ್ಕ ಕಲ್ಪಿಸುತ್ತದೆ ಈ ಹೆದ್ದಾರಿ.

# ಜು. 28 ರಂದು ಕಟ್ಟಡ ಕಾರ್ಮಿಕರ ರಾಜ್ಯಮಟ್ಟದ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ




ರಾಜ್ಯಾದ್ಯಂತ ಹತ್ತಾರು ತಾಲೂಕು ಮತ್ತು ಜಿಲ್ಲಾ ಸಮ್ಮೇಳನ ಮಾಡುವ ಮೂಲಕ ಕಲ್ಯಾಣ ಮಂಡಳಿಯಲ್ಲಿ ನಡೆಯುತ್ತಿರುವ ಅವ್ಯವಹಾರವನ್ನು ನೈಜ ಕಟ್ಟಡ ಕಾರ್ಮಿಕರಿಗೆ ಮನವರಿಕೆ ಮಾಡುವ ಉದ್ದೇಶದಿಂದ ಕಟ್ಟಡ ನಿರ್ಮಾಣ ಕಾರ್ಮಿಕರು ಗದಗ ನಗರದಲ್ಲಿ ಎರಡನೇ ಸಮ್ಮೇಳನವನ್ನು ಇದೇ ಜುಲೈ 28 ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಉಮೇಶ ಅವರಗೆರೆ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಲ್ಯಾಣ ಮಂಡಳಿ ಕಾರ್ಮಿಕರಿಗಾಗಿ 19 ಸೌಲಭ್ಯಗಳನ್ನು ಘೋಷಿಸಿದೆ. ಇದರಲ್ಲಿ 11 ಮಾತ್ರ ಜಾರಿಯಲ್ಲಿವೆ. ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ಕಲ್ಯಾಣ ಮಂಡಳಿಯನ್ನು, ಕಾರ್ಮಿಕರಿಗೆ ಮಂಡಳಿಯನ್ನು ಉಳಿಸಿಕೊಳ್ಳುವುದು ಅನಿವಾರ್ಯ, ಇದಕ್ಕೆ ಹೋರಾಟ ಅನಿವಾರ್ಯವಾಗಿದೆ ಎಂದು ಹೇಳಿದರು.

ಕಾರ್ಮಿಕ ಸಂಘದ ಪ್ರಮುಖ ಬೇಡಿಕೆಗಳಾದ ಶೈಕ್ಷಣಿಕ ಸಹಾಯಧನ ಕಡಿತ ಮಾಡಿರುವ ಆದೇಶ ವಾಪಸ್ ಪಡೆಯಬೇಕು, ಹೈಕೋರ್ಟ್ ಆದೇಶದಂತೆ 2021 ರ ಅಧಿಸೂಚನೆ ಅನ್ವಯಿಸಿ ಶೈಕ್ಷಣಿಕ ಧನ ಸಹಾಯ ಬಿಡುಗಡೆ ಮಾಡಬೇಕು, 2022-23-24 ಸಾಲಿನ ಬಾಕಿ ಅರ್ಜಿಗಳಿಗೂ ಧನ ಸಹಾಯ ಪಾವತಿಸಬೇಕು. ನೈಜ ಕಾರ್ಮಿಕರ ನೋಂದಣಿ ಮತ್ತು ಮರು ನೋಂದಣಿ ಅರ್ಜಿಗಳನ್ನು ಸಕಾರಣವಿಲ್ಲದೇ ತಿರಸ್ಕರಿಸುವುದು ನಿಲ್ಲಬೇಕು ಹಾಗೂ ವಿಳಂಬ ಮಾಡದೇ ಕಾರ್ಡ್ ವಿತರಣೆ ಆಗಬೇಕು. ಸೌಲಭ್ಯಗಳಿಗಾಗಿ ಸಲ್ಲಿಸಿರುವ ಸಾವಿರಾರು ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಪಿಂಚಣಿದಾರರಿಗೆ ಶೀಘ್ರವೇ ಅವರ ಪಿಂಚಣಿ ಹಣವನ್ನು ಬಿಡುಗಡೆ ಮಾಡಬೇಕು. ಪಿಂಚಣಿಗೆ ಅರ್ಜಿ ಸಲ್ಲಿಸುವಲ್ಲಿ ಆಗುತ್ತಿರುವ ತಾಂತ್ರಿಕ ತೊಂದರೆಗಳನ್ನು ನಿವಾರಿಸಬೇಕು, ಹೈಕೋರ್ಟ್ ನಿರ್ದೇಶನದಂತೆ ಟೆಂಡರ್ ಆಧಾರಿತ ಎಲ್ಲ ಖರೀದಿ ವ್ಯವಹಾರಗಳನ್ನು ನಿಲ್ಲಿಸಬೇಕು. ಇದುವರೆಗೆ ನಡೆದಿರುವ ಖರೀದಿಗಳಲ್ಲಿನ ಅವ್ಯವಹಾರಗಳು ನ್ಯಾಯಾಂಗ ತನಿಖೆ ನಡೆಯಬೇಕು, ಹೊಸ ತಂತ್ರಾಂಶದಲ್ಲಿನ ತಾಂತ್ರಿಕ ತೊಂದರೆಗಳು ಹಾಗೂ ಸರ್ವರ್ ಸಮಸ್ಯೆ ಪರಿಹರಿಸಬೇಕು. ಬಾಕಿ ಇರುವ ಸೆಸ್ ಸಂಗ್ರಹ ಮಾಡಿ ಬೃಹತ್ ಖಾಸಗಿ ಹಾಗೂ ಸಾರ್ವಜನಿಕ ನಿರ್ಮಾಣಗಳಿಗೆ ಶೇ.2 ರಷ್ಟು ಸೆಸ್ ವಿಧಿಸಬೇಕು. ಕಲ್ಯಾಣ ಮಂಡಳಿ ಪುನರ್ ರಚಿಸಿ ಕೇಂದ್ರ ಕಾರ್ಮಿಕ ಸಂಘಗಳ ಪ್ರತಿನಿಧಿಗಳ ನೇಮಿಸಬೇಕು ಎಂದು ಆಗ್ರಹಿಸಿ ಹೋರಾಟ ಮಾಡಲಾಗುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಎಂ. ಐ. ನವಲೂರ, ಬಸವರಾಜ ಅರಮನಿ, ಈಶ್ವರ ಲಕ್ಷ್ಮೇಶ್ವರ, ಈರಣ್ಣ ಶಿವಶಿಂಪಿಗೇರ, ಎ. ಎಸ್. ಪೂಜಾರ, ಅಡಿವೆಪ್ಪ ಛಲವಾದಿ, ಎ. ಎಸ್. ಪೀರಜಾದೆ, ವಜೀರ ಬನ್ನೂರ ಸೇರಿದಂತೆ ಮುಂತಾದವರು ಇದ್ದರು.

**ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ವಿರೋಧ**

# ಕಮಲಾ ಹ್ಯಾರಿಸ್ ಅಮೆರಿಕಾ ಆಳಲು ಅನರ್ಹರು



■ವಿಜಯಸಾಕ್ಷಿ ಸುದ್ದಿ, ಅಮೆರಿಕಾ

ಕಮಲಾ ಹ್ಯಾರಿಸ್ ಅಮೆರಿಕಾ ಆಳಲು ಅನರ್ಹರು "ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರು ಆಡಳಿತಕ್ಕೆ ಅನರ್ಹರು; ಅವರದ್ದು ತೀವ್ರಗಾಮಿ ಎಡ ಹುಚ್ಚು" ಎಂದು ಅಮೆರಿಕದ ಮಾಜಿ ಅಧ್ಯಕ್ಷ ಮತ್ತು ರಿಪಬ್ಲಿಕನ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಬುಧವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ.

78 ವರ್ಷದ ಟ್ರಂಪ್ ಅವರು ತಮ್ಮ ಡೆಮಾಕ್ರಟಿಕ್ ಪ್ರತಿಸ್ಪರ್ಧಿಯ ಮೇಲೆ ಕಟುವಾದ ದಾಳಿಯನ್ನು ಪ್ರಾರಂಭಿಸಿದರು, ಹ್ಯಾರಿಸ್ ಅವರು ಸಂಭಾವ್ಯ ಅಭ್ಯರ್ಥಿಯಾದ ನಂತರ ಚುನಾವಣಾ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಲು ಮೊದಲ ಬಾರಿಗೆ ವೇದಿಕೆಯನ್ನು ಪಡೆದರು.ಜಳೆದ ವಾರ, ಅಧ್ಯಕ್ಷ ಜೋ ಬಿಡೆನ್ ಅವರು ಚುನಾವಣಾ ಓಟದಿಂದ ಹೊರಗುಳಿಯುವುದಾಗಿ ಘೋಷಿಸಿ, ಕಮಲಾ ಹ್ಯಾರಿಸ್ ಅವರನ್ನು ಅವರ ಉತ್ತರಾಧಿಕಾರಿ ಎಂದು ಹೆಸರಿಸಿದರು.

ಕಮಲಾ ಈಗ ಸಂಭಾವ್ಯ ಡೆಮಾಕ್ರಟಿಕ್ ಅಭ್ಯರ್ಥಿಯಾಗಿದ್ದಾರೆ ಮತ್ತು ಆಗಸ್ಟ್‌ನಲ್ಲಿ ನಡೆದ ಡೆಮಾಕ್ರಟಿಕ್ ರಾಷ್ಟ್ರೀಯ ಸಮಾವೇಶದಲ್ಲಿ ಅವರನ್ನು ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿಯಾಗಿ ಅಧಿಕೃತವಾಗಿ ಘೋಷಿಸಲಾಯಿತು.

"ಮೂರೂವರೆ ವರ್ಷಗಳಿಂದ, ಲಿನ್ ಕಮಲಾ ಹ್ಯಾರಿಸ್ ಬಿಡೆನ್ ದುರಂತದ ಹಿಂದೆ ಅಲ್ಟ್ರಾ-ಲಿಬರಲ್ ಚಾಲನಾ ಶಕ್ತಿಯಾಗಿದ್ದಾರೆ. ಆಕೆ ಆಮೂಲಾಗ್ರ ಎಡ ಹುಚ್ಚಿ, ಆಕೆ ಎಂದಾದರೂ ಅಧಿಕಾರಕ್ಕೆ ಬರುವ ಅವಕಾಶ ಸಿಕ್ಕರೆ ನಮ್ಮ ದೇಶವನ್ನು ನಾಶಮಾಡುತ್ತಾರೆ. ನಾವು ಅದನ್ನು ಆಗಲು ಬಿಡುವುದಿಲ್ಲ" ಎಂದು ಟ್ರಂಪ್ ಅವರು ಉಪಾಧ್ಯಕ್ಷರ ವಿರುದ್ಧ ದಾಳಿಯ ಸುರಿಮಳೆಯನ್ನು ಹೊರಹಾಕಿದರು.

ಗುಂಡು ಹಾರಿಸಿದಾಗ ನನಗೆ ಏನಾದರೂ ಸಂಭವಿಸಿದೆ ಎಂದು ಅವರು ಹೇಳುತ್ತಾರೆ. ನೀವು ಈ ಜನರೊಂದಿಗೆ ವ್ಯವಹರಿಸುವಾಗ, ಅವರು ತುಂಬಾ ಅಪಾಯಕಾರಿ ಜನರು. ನೀವು ಅವರೊಂದಿಗೆ ವ್ಯವಹರಿಸುವಾಗ, ನೀವು ತುಂಬಾ ಒಳ್ಳೆಯವರಾಗಿರಲು ಸಾಧ್ಯವಿಲ್ಲ. ನೀವು ನಿಜವಾಗಿಯೂ ಸಾಧ್ಯವಿಲ್ಲ. ಹಾಗಾಗಿ ನಿಮಗೆ ಅಭ್ಯಂತರವಿಲ್ಲದಿದ್ದರೆ, ನಾನು ಒಳ್ಳೆಯವನಾಗುವುದಿಲ್ಲ. ಅದು ಸರಿಯೆ" ಎಂದು ಸಭಿಕರ ಚಪ್ಪಾಳೆಗಳ ನಡುವೆ ಅವರು ತಮ್ಮ ಬೆಂಬಲಿಗರನ್ನು ಪ್ರಶ್ನಿಸಿದರು.

ಕಮಲಾ ಹ್ಯಾರಿಸ್ ಅಮೆರಿಕದ ಇತಿಹಾಸದಲ್ಲಿ ಅತ್ಯಂತ ಉದಾರವಾದಿ ಚುನಾಯಿತ ರಾಜಕಾರಣಿ. ಆಕೆ ಅತಿ ಉದಾರವಾದಿ ರಾಜಕಾರಣಿ. ಆಕೆ ಸಂಪೂರ್ಣವಾಗಿ ಭಯಾನಕ; ಬರ್ನಿ ಸ್ಯಾಂಡರ್ಸ್‌ಗಿಂತ ಹೆಚ್ಚು ಉದಾರವಾದಿ. ಆಕೆ ಎಂದಾದರೂ ಅಧಿಕಾರಕ್ಕೆ ಪ್ರವೇಶಿಸಿದರೆ, ಈ ದೇಶವನ್ನು ತುಂಬಾ ವೇಗವಾಗಿ ನಾಶಪಡಿಸುತ್ತಾರೆ" ಎಂದು ಅವರು ಆರೋಪಿಸಿದರು.

ಆಕೆಯನ್ನು ಈ ಭಯಾನಕ ಅಧ್ಯಕ್ಷ, ಈ ಭಯಾನಕ ವ್ಯಕ್ತಿ ನೇಮಿಸಿದ್ದಾರೆ. ಈ ವ್ಯಕ್ತಿ ತನ್ನ ನೆಲಮಾಳಿಗೆಯಲ್ಲಿ ಹೇಗೆ ಅಧ್ಯಕ್ಷನಾಗುತ್ತಾನೆ. ಅವನು ತನ್ನ ನೆಲಮಾಳಿಗೆಯಲ್ಲಿ ಉಳಿದುಕೊಂಡನು. ನಾವು ಮೊದಲ ಬಾರಿಗೆ ಮಾಡುವುದಕ್ಕಿಂತ ಎರಡನೇ ಬಾರಿ ಉತ್ತಮವಾಗಿ ಮಾಡಿದ್ದೇವೆ. ಈ ವ್ಯಕ್ತಿ ಹೇಗೆ ಅಧ್ಯಕ್ಷರಾದರು, ಮೂರೂವರೆ ವರ್ಷಗಳಲ್ಲಿ ಅವರು ಈ ದೇಶಕ್ಕೆ ಏನು ಮಾಡಿದ್ದಾರೆ ಮತ್ತು ನಾವು ಅದನ್ನು ತಿರುಗಿಸಲಿದ್ದೇವೆ. ಆದರೆ, ಅವರು ನಮ್ಮ ದೇಶಕ್ಕೆ ಏನು ಮಾಡಿದ್ದಾರೆ ಎಂಬುದು ಯೋಚಿಸಲಾಗದು" ಎಂದು ಅವರು ಆರೋಪಿಸಿದರು.

"ಜೋ ಬಿಡೆನ್ ಅವರ ಮಾನಸಿಕ ಅಸಾಮರ್ಥ್ಯದ ಬಗ್ಗೆ ಕಮಲಾ ನಿಮಗೆ ತುಂಬಾ ನಿರ್ಲಜ್ಜವಾಗಿ ಸುಳ್ಳು ಹೇಳಿದರೆ, ಆಕೆ ನಿಮಗೆ ಯಾವುದರ ಬಗ್ಗೆಯೂ ಸುಳ್ಳು ಹೇಳುತ್ತಾರೆ. ಆಕೆಯನ್ನು ಎಂದಿಗೂ ನಂಬಲು ಸಾಧ್ಯವಿಲ್ಲ. ವಕ್ರವಾದ ಜೋ ಬಿಡೆನ್ ಅವರಂತೆಯೇ ಕಮಲಾ ಹ್ಯಾರಿಸ್ ನಾಯಕತ್ವಕ್ಕೆ ಅನರ್ಹರು.

ಅವರು ದೇಶ ಮುನ್ನಡೆಸಲು ಅನರ್ಹರು. ಒಂದೇ ವರ್ಷದಲ್ಲಿ ನಮ್ಮ ದೇಶವನ್ನು ನಾಶಮಾಡುತ್ತಾರೆ; ಈ ದೇಶ ನಾಶವಾಗುತ್ತದೆ" ಎಂದರು.

**ಮಂಡಿ ಕ್ಷೇತ್ರದಿಂದ ಆಯ್ಕೆ ಪ್ರಶ್ನಿಸಿ ಅರ್ಜಿ**

# ಕಂಗನಾ ರಣಾವತ್‌ಗೆ ಹೈಕೋರ್ಟ್ ನೋಟಿಸ್




■ವಿಜಯಸಾಕ್ಷಿ ಸುದ್ದಿ, ಹಿಮಾಚಲ ಪ್ರದೇಶ

ಕಂಗನಾ ರಣಾವತ್‌ಗೆ ಹೈಕೋರ್ಟ್ ನೋಟಿಸ್ ಮಂಡಿ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಸಂಸದೆ ಕಂಗನಾ ರಣಾವತ್ ಅವರ ಆಯ್ಕೆ ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿ ವಿಚಾರಣೆ ನಡೆಸಿರುವ ಹಿಮಾಚಲ ಪ್ರದೇಶ ಹೈಕೋರ್ಟ್, ಕಂಗನಾ ಅವರಿಗೆ ನೋಟಿಸ್ ಜಾರಿ ಮಾಡಿದೆ.

ಆಗಸ್ಟ್ 21ರ ಒಳಗಾಗಿ ಉತ್ತರ ನೀಡುವಂತೆ ಕಂಗನಾ ಅವರಿಗೆ ನ್ಯಾಯಮೂರ್ತಿ ಜೋತ್ಸ್ನಾ ರೆವಾಲ್ ಅವರು ನಿರ್ದೇಶನ ನೀಡಿದ್ದಾರೆ ಎಂದು ತಿಳಿದು ಬಂದಿದೆ.

ಲೋಕಸಭೆ ಚುನಾವಣೆ ವೇಳೆ ಮಂಡಿಯ ಚುನಾವಣಾಧಿಕಾರಿ ತನ್ನ ನಾಮಪತ್ರವನ್ನು ಅನ್ಯಾಯವಾಗಿ ತಿರಸ್ಕರಿಸಿದ್ದರು ಎಂದು ಆರೋಪಿಸಿ ಕಿನ್ನೂರು ನಿವಾಸಿ ಲಾಯಕ್ ರಾಮ್ ನೇಗಿ ಎಂಬವರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಜಿಲ್ಲಾಧಿಕಾರಿಯನ್ನು ಪ್ರಕರಣದ ಪಕ್ಷಗಾರನ್ನಾಗಿ ಮಾಡಿದ್ದಾರೆ.

ಅರಣ್ಯ ಇಲಾಖೆಯ ಮಾಜಿ ನೌಕರ ನೇಗಿ ಅವರು ಅವಧಿಪೂರ್ವ ನಿವೃತ್ತಿ ಪಡೆದಿದ್ದರು. ಇಲಾಖೆಯಿಂದ ಯಾವುದೇ ಬಾಕಿಯಿಲ್ಲ ಪ್ರಮಾಣಪತ್ರ (ಓಔ ಜಣಜ ಅಜಡಿಣುಜಿಭಿಚಿಣಜ)ಪಡೆದಿದ್ದರು. ಅದನ್ನು ಲಗ್ಗತ್ತಿಸಿ ಲೋಕಸಭೆ ಚುನಾವಣೆಗೆ ಮಂಡಿ ಕ್ಷೇತ್ರದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದರು.

ಆದರೆ, ಚುನಾವಣಾಧಿಕಾರಿ ವಿದ್ಯುತ್, ನೀರು ಮತ್ತು ದೂರವಾಣಿ ಇಲಾಖೆಗಳಲ್ಲಿ ಯಾವುದೇ ಬಾಕಿ ಇಲ್ಲ ಎಂಬ ಪ್ರಮಾಣಪತ್ರ ಸಲ್ಲಿಸಲು ಒಂದು ದಿನದ ಗಡುವು ನೀಡಿದ್ದರು. ಅದರಂತೆ, ಪ್ರಮಾಣಪತ್ರ ಸಲ್ಲಿಸಿದರೂ, ಅವರು ನಾಮಪತ್ರವನ್ನು ಸ್ವೀಕರಿಸಿಲ್ಲ ಎಂದು ನೇಗಿ ಆರೋಪಿಸಿದ್ದಾರೆ.

ಒಂದು ವೇಳೆ ನಾಮಪತ್ರ ತಿರಸ್ಕೃತವಾಗದಿದ್ದರೆ ನಾನು ಚುನಾವಣೆಯಲ್ಲಿ ಗೆಲುವು ಸಾಧಿಸುತ್ತಿದ್ದೆ. ಹೀಗಾಗಿ ಮಂಡಿ ಲೋಕಸಭಾ ಕ್ಷೇತ್ರದ ಚುನಾವಣೆಯನ್ನು ರದ್ದು ಮಾಡಬೇಕು ಎಂದು ನೇಗಿ ಕೋರಿದ್ದಾರೆ.

# 'ಒಂದು ದೇಶ-ಒಂದು ಚುನಾವಣೆ, ನೀಟ್ ಪರೀಕ್ಷೆ' ವಿರುದ್ಧ ನಿರ್ಣಯ ಅಂಗೀಕರಿಸಿದ ರಾಜ್ಯ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ನೀಟ್ ಪರೀಕ್ಷೆ ಹಾಗೂ ಕೇಂದ್ರ ಸರ್ಕಾರದ ಒಂದು ದೇಶ, ಒಂದು ಚುನಾವಣೆ ವಿರೋಧಿಸಿ ಕರ್ನಾಟಕ ಸರ್ಕಾರ ವಿಧಾನಸಭೆಯಲ್ಲಿ ನಿರ್ಣಯ ಮಂಡಿಸಿದ್ದು, ವಿಧಾನಸಭೆ ಮತ್ತು ವಿಧಾನ ಪರಿಷತ್ ಅದನ್ನು ಅಂಗೀಕರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಜುಲೈ 22ರಂದು ನಡೆದ ನಡೆದ ಸಚಿವ ಸಂಪುಟ ಸಭೆಯಲ್ಲಿ ನೀಟ್ ಪರೀಕ್ಷೆ ಮತ್ತು ಕೇಂದ್ರ ಸರ್ಕಾರ ಒಂದು ದೇಶ, ಒಂದು ಚುನಾವಣೆ ವಿರೋಧಿಸಲು ನಿರ್ಧರಿಸಲಾಗಿತ್ತು.

ನಿರ್ಣಯ ಮಂಡಿಸಿದ ಕಾನೂನು ಸಚಿವ ಹೆಚ್.ಕೆ ಪಾಟೀಲ್, "ಕೇಂದ್ರ ಸರ್ಕಾರದ 'ಒಂದು ದೇಶ, ಒಂದು ಚುನಾವಣೆ' ಪರಿಕಲ್ಪನೆ ಮತ್ತು ಜನಸಂಖ್ಯೆ ಆಧಾರದಲ್ಲಿ ಲೋಕಸಭೆ ಹಾಗೂ ವಿಧಾನಸಭೆ ಕ್ಷೇತ್ರಗಳ ಮರು ವಿಂಗಡನೆ ಪ್ರಕ್ರಿಯೆಯನ್ನೂ ವಿರೋಧಿಸಿ ರಾಜ್ಯ ಸರ್ಕಾರ ಅಧಿವೇಶನದಲ್ಲಿ ನಿರ್ಣಯ ಕೈಗೊಂಡಿದ್ದು, ಇದನ್ನು ಅಂಗೀಕರಿಸಲಾಗಿದೆ ಎಂದು ಹೇಳಿದ್ದಾರೆ.

ನೀಟ್ ಪರೀಕ್ಷಾ ವ್ಯವಸ್ಥೆಯು ಗ್ರಾಮೀಣ ಬಡ ಮಕ್ಕಳ ವೈದ್ಯಕೀಯ ಶಿಕ್ಷಣ ಅವಕಾಶಗಳ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ ಹಾಗೂ ಶಾಲಾ ಶಿಕ್ಷಣ ವ್ಯವಸ್ಥೆಯನ್ನು ನಿರರ್ಥಕಗೊಳಿಸುವುದು ಮಾತ್ರವಲ್ಲದೆ ರಾಜ್ಯ ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ರಾಜ್ಯ ಸರ್ಕಾರದ ಹಕ್ಕನ್ನು ಕಸಿದುಕೊಳ್ಳುತ್ತಿದೆ.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ನೇತೃತ್ವದಲ್ಲಿ ದಾಳಿ । ನಿಷೇಧಿತ ಪ್ಲಾಸ್ಟಿಕ್ ವಶಕ್ಕೆ

# ಏಕ ಬಳಕೆಯ ಪ್ಲಾಸ್ಟಿಕ್ ತ್ಯಜಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಅನೇಕ ಕಿರಾಣಿ, ಬೇಕರಿ ಸೇರಿದಂತೆ ಇನ್ನಿತರ ಅಂಗಡಿಗಳ ಮೇಲೆ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ನೇತೃತ್ವದಲ್ಲಿ ಗುರುವಾರ ಮುಂಜಾನೆ ಹಠಾತ್ ದಾಳಿ ನಡೆಸಿ, ಸುಮಾರು ಒಂದು ಕ್ವಿಂಟಲ್‌ಗೂ ಅಧಿಕ ನಿಷೇದಿತ ಪ್ಲಾಸ್ಟಿಕ್ ಬ್ಯಾಗುಗಳು, ಕಪ್‌ಗಳನ್ನು ವಶಪಡಿಸಿಕೊಳ್ಳಲಾಯಿತು.

ಗುರುವಾರ ಮುಂಜಾನೆ ಮುಖ್ಯಾಧಿಕಾರಿ, ಅರೋಗ್ಯ ಹಾಗೂ ಕಂದಾಯ ಸಿಬ್ಬಂದಿಗಳು ಪೊಲೀಸ್ ಭದ್ರತೆಯಲ್ಲಿ ಪಟ್ಟಣದ ವಾಣಿಜ್ಯ ಮಳಿಗೆ ಹಾಗೂ ಬೇಕರಿ ಸೇರಿದಂತೆ ಇನ್ನಿತರ ಅಂಗಡಿಗಳ ಮೇಲೆ ದಾಳಿ ನಡೆಸಿ, ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಪಟ್ಟಣದಲ್ಲಿ ಸುಮಾರು 60 ವಾಣಿಜ್ಯ ಅಂಗಡಿಗಳ ಮೇಲೆ ದಾಳಿ ಮಾಡಿ, ಪ್ಲಾಸ್ಟಿಕ್ ಬಾಟಲ್, ಕಪ್, ಕ್ಯಾರಿಬ್ಯಾಗ್, ಪೈಪ್‌ಗಳು ಇತ್ಯಾದಿ ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಅಂದಾಜು 1.20 ಕ್ವಿಂಟಲ್ ನಿಷೇದಿತ ಪ್ಲಾಸ್ಟಿಕ್ ವಶಪಡಿಸಿಕೊಂಡು ಅಂಗಡಿಕಾರರಿಗೆ ಒಟ್ಟೂ ರೂ. 36 ಸಾವಿರಕ್ಕೂ ಅಧಿಕ ದಂಡ ವಿಧಿಸಲಾಗಿದೆ.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ನಾವು ನಮ್ಮ ಮುಂದಿನ ಪೀಳಿಗೆಗೆ ವಿಷಯುಕ್ತ ಪರಿಸರವನ್ನು ನೀಡಬಾರದು. ಆ ಕಾರಣಕ್ಕೆ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ಬಿಡಬೇಕು. ಬೀದಿ ಬದಿ ವ್ಯಾಪಾರಸ್ಥರು, ಕಿರಾಣಿ, ಬೇಕರಿ ಅಂಗಡಿಗಳು ಸೇರಿದಂತೆ ಎಲ್ಲೆಡೆ ಏಕ ಬಳಕೆಯ ನಿಷೇದಿತ ಪ್ಲಾಸ್ಟಿಕ್ ಬಳಕೆ ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಒಂದು ವೇಳೆ ಪ್ಲಾಸ್ಟಿಕ್ ಬಳಕೆ ಅಥವಾ ಮಾರಾಟ ಮಾಡುವುದು ಕಂಡುಬಂದಲ್ಲಿ ಪ್ಲಾಸ್ಟಿಕ್ ವಶಪಡಿಸಿಕೊಂಡು ಅಂಥವರ ಮೇಲೆ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮದಂತೆ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿ, ಸಾರ್ವಜನಿಕರು ಪ್ಲಾಸ್ಟಿಕ್ ಬಳಕೆ ಮಾಡದೇ ಸಹಕರಿಸಿ ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಪರಿಸರ ಹಾನಿಗೆ ಕಾರಣವಾಗುವ ಪ್ಲಾಸ್ಟಿಕ್ ಬಳಕೆ ನಿಷೇಧಿಸಿದ್ದರೂ ಸಹ ಪಟ್ಟಣದಲ್ಲಿನ ಕೆಲವು ಅಂಗಡಿಗಳಲ್ಲಿ ಪ್ಲಾಸ್ಟಿಕ್ ಚೀಲಗಳ ಬಳಕೆ ನಿಂತಿಲ್ಲ. ಪ್ಲಾಸ್ಟಿಕ್ ಬಳಸುವುದರಿಂದ ತ್ಯಾಜ್ಯ ಹೆಚ್ಚಾಗುತ್ತದೆ ಹಾಗೂ ಪ್ಲಾಸ್ಟಿಕ್ ಮಣ್ಣಿನಲ್ಲಿ ಕೊಳೆಯುವುದಿಲ್ಲ. ಇದರಿಂದ ಪರಿಸರ ಮಾಲಿನ್ಯ ಹೆಚ್ಚಾಗುತ್ತದೆ. ಆರೋಗ್ಯಕ್ಕೂ ಸಹ ಇದು ಒಳ್ಳೆಯದಲ್ಲ ಎಂದರು.

ಈ ಸಂದರ್ಭದಲ್ಲಿ ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಕಂದಾಯ ಅಧಿಕಾರಿ, ಶಿವಾನಂದ ಅಜ್ಜಣ್ಣನವರ, ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಹನಮಂತ ನಂದೆಣ್ಣನವರ, ಸಿದ್ದು ಹಿರೇಮಠ, ಉಮಾ ಬೆಳವಿಗಿ ಪುರಸಭೆ ಸಿಬ್ಬಂದಿಗಳು, ಪೊಲೀಸ್ ಸಿಬ್ಬಂದಿಗಳು ಇದ್ದರು.

# ದೇವರನ್ನು ತೋರಿಸುವ ಗುರು ದೊಡ್ಡವನು

■ವಿಜಯಸಾಕ್ಷಿ ಸುದ್ದಿ, ನರೇಗಲ್

ದೇವರು ಈ ಸೃಷ್ಟಿಯಲ್ಲಿ ಎಲ್ಲೆಲ್ಲೂ ಇದ್ದಾನೆ. ಅವನಿಲ್ಲದೆ ಈ ಜಗತ್ತಿಲ್ಲ ಎಂಬುದು ನಮಗೆಲ್ಲ ಗೊತ್ತು. ಆದರೆ ದೇವರ ಇರುವನ್ನು ನಮಗೆ ತೋರಿಸುವವನು ಗುರು. ಆದ್ದರಿಂದ ಗುರುವು ಎಲ್ಲರಿಗಿಂತಲೂ ದೊಡ್ಡವನಾಗಿದ್ದಾನೆ. ಒಂದು ವೇಳೆ ದೇವರು ನಮ್ಮ ಮೇಲೆ ಮುನಿಯಬಹುದು. ಆದರೆ ಗುರುವೆಂದಿಗೂ ಮುನಿಯನು ಎಂದು ನಿಡಗುಂದಿಕೊಪ್ಪದ ಶಾಖಾ ಶಿವಯೋಗಮಂದಿರದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರು ಹೇಳಿದರು.

ಸಮೀಪದ ನಿಡಗುಂದಿ ಗ್ರಾಮದಲ್ಲಿ ಈಚೆಗೆ ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ನಡೆದ 3ನೇ ಶಿವಾನುಭವ ಗೋಷ್ಠಿಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಗುರುವಿನ ಮಹಿಮೆ ನಿಜಕ್ಕೂ ಅಗಾಧವಾಗಿದೆ. ಒಮ್ಮೆ ಗುರುವನ್ನು ನಂಬಿ ನಡೆದರೆ ಜೀವನದಲ್ಲಿ ಸೋಲೆಂಬುದೇ ಇಲ್ಲ. ಗುರುವಿಗೆ ಸಂಪೂರ್ಣ ಶರಣು ಹೋಗದ ಹೊರತು ನಮಗೆ ಜೀವನ್ಮುಕ್ತಿ ಸಿಗುವುದಿಲ್ಲ. ಗುರು ಸದಾಕಾಲ ತನ್ನನ್ನು ನಂಬಿರುವ ಶಿಷ್ಯನೊಂದಿಗೆ ಇದ್ದು ಅವನಲ್ಲಿ ಆತ್ಮವಿಶ್ವಾಸವನ್ನು ತುಂಬಿ ಮುಕ್ತಿ ಮಾರ್ಗಕ್ಕೆ ಕರೆದೊಯ್ಯುತ್ತಾನೆ ಎಂದು ಶ್ರೀಗಳು ತಿಳಿಸಿದರು.

ಗಜೇಂದ್ರಗಡದ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಮಂಜುಳಾ ಈಶ್ವರಪ್ಪ ರೇವಡಿ, ನಾಗೇಂದ್ರಗಡದ ಸಮಾಜ ಸೇವಕ ಶಿವಾನಂದ ಮಠದ, ಬೆಳಗಾವಿ ಜಿಲ್ಲೆಯ ಸಂಗಳ ಗ್ರಾಮದ ಸಮಾಜ ಸೇವಕ ಚನ್ನಯ್ಯ ಸಿದ್ದಯ್ಯ ಸಂಗಳದಮಠ ಪೂಜ್ಯರಿಂದ ಗೌರವ ರಕ್ಷೆ ಸ್ವೀಕರಿಸಿ ಮಾತನಾಡಿದರು.

ಸಮ್ಮುಖ ವಹಿಸಿದ್ದ ಇಟಗಿ, ನಿಡಗುಂದಿ ಧರ್ಮರಮಠದ ಷಣ್ಮುಖಪ್ಪಜ್ಜನವರು ಆಶೀರ್ವಚನ ನೀಡಿದರು. ಬಸವರಾಜ ಜಂಗಣ್ಣವರ, ಶರಣಪ್ಪ ಅರಮನಿಯವರು ಸಂಗೀತ ಸೇವೆ ಸಲ್ಲಿಸಿದರು. ಶ್ರೀ ಸಂಗಮೇಶ್ವರ ದೇವಸ್ಥಾನದ ಓಣಿಯ ಸದ್ಭಕ್ತರು ದಾಸೋಹ ಸೇವೆಯನ್ನು ಸಲ್ಲಿಸಿದರು.

ಶ್ರೀ ಅಕ್ಕಮಹಾದೇವಿ ಮಹಿಳಾ ವೇದಿಕೆಯ ಸದಸ್ಯರು ಪ್ರಾರ್ಥಿಸಿದರು. ಎ.ಎಸ್. ಗೆದಗೇರಿ ಸ್ವಾಗತಿಸಿದರು. ಶಿಕ್ಷಕ ಡಿ.ಎಸ್. ಬಡಿಗೇರ ನಿರೂಪಿಸಿದರು.

# ಬಸವೇಶ್ವರ ಶಾಲೆಯಲ್ಲಿ ಶಿಕ್ಷಾ ಸಪ್ತಾಹ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಾ ಸಪ್ತಾಹ ಕಾರ್ಯಕ್ರಮದ ಅಡಿಯಲ್ಲಿ ಟಿ.ಎಲ್.ಎಮ್ ದಿನ ಆಚರಿಸಲಾಯಿತು. ಮುಖ್ಯ ಶಿಕ್ಷಕಿ ಬಿ.ಜಿ. ಶಿರ್ಸಿ ಮಾತನಾಡಿ, ಈ ಮಹತ್ತರ ಶೈಕ್ಷಣಿಕ ಕಾರ್ಯದಲ್ಲಿ ಟಿ.ಎಲ್.ಎಮ್ ಅತಿ ಅವಶ್ಯಕವಾಗಿ ಬಳಸುವ ಸಂಪಲನ್ಮೂಲಗಳಾಗಿವೆ. ಪರಿಣಾಮಕಾರಿ ಕಲಿಕೆಗೆ ಇವು ಅಗತ್ಯವಾಗಿವೆ ಎಂದು ಹೇಳಿದರು.

ಈ ವೇಳೆ ಶಿಕ್ಷಕ ವೃಂದದ ಕೆ.ಆಯ್. ಕೋಳಿವಾಡ, ಆಯ್.ಬಿ. ಒಂಟೆಲಿ, ಪೂರ್ಣಿಮಾ ಅಂಗಡಿ, ವಿ.ಪಿ. ಗ್ರಾಮಪುರೋಹಿತ, ವಿ.ಎಸ್. ಜಾದವ್, ಎಸ್.ಕೆ. ಕುಲಕರ್ಣಿ, ಸಾವಿತ್ರಿ ಮಾನ್ವಿ, ಎಮ್.ಎಮ್. ಸಿಳ್ಳಿನ್, ಗೀತಾ ಶಿಂಧೆ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ ಅಯ್ಯನಗೌಡ್ರ, ಎಮ್.ವಿ. ಕಡೆತೋಟದ, ರಾಜೇಶ್ವರಿ ಈಟಿ, ಗೀತಾ ಕಂಬಳಿ, ರಜಿಯಾಬೇಗಂ, ನಯನಾ ಜೋಳದ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ವೀಣಾ ಯಾಳಗಿ, ಪದ್ಮಾವತಿ ಅಂಬಿಗೇರ, ಶ್ವೇತಾ ಹಿರೇಮಠ, ನೇತ್ರಾ ಸೋಬಾನದ, ನಂದಿತಾ ರಾಜೂರ ಸೇರಿದಂತೆ ಎಲ್ಲ ಸಿಬ್ಬಂದಿ ಮತ್ತು ಮಕ್ಕಳು ಭಾಗವಹಿಸಿದ್ದರು.

ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಪುರಸ್ಕಾರ–4

# ಶಿಕ್ಷಣದಿಂದ ವ್ಯಕ್ತಿತ್ವ ವಿಕಸನ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣದಿಂದ ವ್ಯಕ್ತಿ ಸುಶಿಕ್ಷಿತನಾಗಬಲ್ಲ. ಶಿಕ್ಷಣದಿಂದ ವ್ಯಕ್ತಿತ್ವ ವಿಕಸನ ಉನ್ನತ ಸಾಧನೆಗೆ ಮುನ್ನುಡಿಯಾಗಬಲ್ಲದು ಎಂದು ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಅಭಿಪ್ರಾಯಪಟ್ಟರು.



ಅವರು ಮಂಗಳವಾರ ಗದುಗಿನ ರಾಜೀವಗಾಂಧಿ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ಗದಗ ತಾಲೂಕಿನ ಸರಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಸರಣಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಸರಕಾರಿ ಶಾಲೆಗಳು ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಮುಂಚೂಣಿಯಲ್ಲಿವೆ. ಖಾಸಗಿ ಹೈಟೆಕ್ ಶಾಲೆಗಳಿಗಿಂತಲೂ ಸರಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣ ಲಭ್ಯವಾಗುತ್ತಿರುವದು ಬಹಳಷ್ಟು ಸಂತೋಷದ ಸಂಗತಿ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಎಲ್.ಬಿ. ಕಾಲವಾಡ ಸಂದರ್ಭೋಚಿತವಾಗಿ ಮಾತನಾಡಿದರು. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಹಾಗೂ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ ಪ್ರತಿಷ್ಠಾನದ ಕಾರ್ಯಚಟುವಟಿಕೆಗಳನ್ನು ವಿವರಿಸಿದರು.

ಶಾಲೆಯ ವಿದ್ಯಾರ್ಥಿಗಳಾದ ಲಕ್ಷ್ಮೀ ಪಂಚಾಕ್ಷರಿ ಕೊಪ್ಪದ, ಪ್ರೀತಿ ಜಗದೀಶ ಅಂಬಿಗೇರ, ದೇವರಾಜ ಹಿರೇಕುರುಬರ, ಖಾನು ಇರಕಲ್, ದಾವುದ್ ಮುಲ್ಲಾ ಅವರಿಗೆ ಮುಖ್ಯ ಅತಿಥಿಗಳು ಸೇರಿದಂತೆ ಪ್ರತಿಷ್ಠಾನದ ಪದಾಧಿಕಾರಿಗಳು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು.

ಸಮಾರಂಭದಲ್ಲಿ ಪ್ರತಿಷ್ಠಾನದ ಕಾರ್ಯದರ್ಶಿ ಶಿವಾನಂದ ಕತ್ತಿ, ಸಿದ್ಧಣ್ಣ ಕವಲೂರ, ಕೃಷ್ಣಾ ಆಟದ, ನೇಹಾ ಖಟವಟೆ, ರೇಖಾ ಹುಡೇದ ಉಪಸ್ಥಿತರಿದ್ದರು. ಮಧು ಗಂಗಪ್ಪನವರ ಸಂಗಡಿಗರು ಪ್ರಾರ್ಥಿಸಿದರು, ಪಿ.ಎಸ್. ಕರೇಕುಲದ ಸ್ವಾಗತಿಸಿದರು. ಕೊನೆಗೆ ವೈ. ಎಸ್.ಬಮ್ಮನಾಳ ವಂದಿಸಿದರು.

ಶಿವಾನುಭವ ಕಾರ್ಯಕ್ರಮದಲ್ಲಿ ಡಾ.ತೋಂಟದ ಸಿದ್ಧರಾಮ ಶ್ರೀಗಳು

# ಶರಣರು ಸಂತೃಪ್ತಿಗೆ ಮಹತ್ವ ಕೊಟ್ಟಿದ್ದಾರೆ



■ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶರಣರ ವಚನ ಸಾಹಿತ್ಯ ಬಹಳ ಮೌಲಿಕವಾಗಿದೆ. ಬಸವಾದಿ ಶಿವಶರಣರ ವಚನಗಳನ್ನು ಮತ್ತು ಜೀವನ ಚರಿತ್ರೆಯನ್ನು ಓದಿದಾಗ ಶರಣರು ಸಮೃದ್ಧಿಗಿಂತಲೂ, ಸಂತೃಪ್ತಿಗೆ ವಿಶೇಷವಾದ ಮಹತ್ವ ಕೊಟ್ಟಿದ್ದಾರೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2703ನೇ ಶಿವಾನುಭವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ವಚನ ಸಾಹಿತ್ಯದಲ್ಲಿ ಮೌಲ್ಯಗಳು, ಆದರ್ಶಗಳು, ತತ್ವಗಳು ಬಹಳ ಅಮೂಲ್ಯವಾಗಿರುವುದರಿಂದ ವಚನ ಸಾಹಿತ್ಯಕ್ಕೆ ಅಂತಾರಾಷ್ಟ್ರೀಯ ಮಟ್ಟದ ಗೌರವ ಪ್ರಾಪ್ತವಾಗಿದೆ. ವಚನ ಸಾಹಿತ್ಯವನ್ನು ಬೇರೆ ಬೇರೆ ದೇಶಗಳಲ್ಲಿರುವ ಜನರು ಕೂಡಾ ತಮ್ಮ ತಮ್ಮ ಭಾಷೆಯಲ್ಲಿ ಓದುತ್ತಿದ್ದಾರೆ ಎಂದರು.

ವನ್ಯಜೀವಿ ಸಂರಕ್ಷಣೆಗಾಗಿ ಮುಖ್ಯಮಂತ್ರಿಗಳ ಚಿನ್ನದ ಪದಕ ಪುರಸ್ಕೃತರಾದ ಕಪ್ಪತ್ತಗುಡ್ಡ ವಲಯದ ಅರಣ್ಯಾಧಿಕಾರಿ ವೀರೇಂದ್ರ ಸೋಮಶೇಖರ ಮರಿಬಸವಣ್ಣವರ ಅವರನ್ನು ಪೂಜ್ಯರು ಸಂಮಾನಿಸಿದರು. ಎಸ್.ಎ. ಪಾಟೀಲ ಮಾತನಾಡಿದರು.

ಮೃತ್ಯುಂಜಯ ಹಿರೇಮಠ ಮತ್ತು ಗುರುನಾಥ ಸುತಾರ ವಚನಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಅನ್ನಪೂರ್ಣ ಎಸ್.ವರವಿ, ವಚನ ಚಿಂತನೆಯನ್ನು ನಿರ್ಮಲಾ ಜಿ.ಪಾಟೀಲ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಿದ್ದ ಎಸ್.ಎ. ಪಾಟೀಲ, ವಿ.ಎ. ಪಾಟೀಲ ಹಾಗೂ ಜಿ.ಎ. ಪಾಟೀಲ ಮತ್ತು ಕುಟುಂಬದ ಸದಸ್ಯರನ್ನು ಸಂಮಾನಿಸಲಾಯಿತು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

'ಶರಣ ಮಾರ್ಗ' ವಿಷಯದ ಕುರಿತು ಅಥಣಿಯ ಡಾ. ಸಿದ್ಧಣ್ಣ ಉತ್ನಾಳ ಉಪನ್ಯಾಸ ನೀಡಿ, 12ನೇ ಶತಮಾನದ ಬಸವಾದಿ ಶಿವಶರಣರು ಕಾಯಕ ಮತ್ತು ದಾಸೋಹ ಸಿದ್ಧಾಂತವನ್ನು ಸಾರಿದ್ದಾರೆ. ಪ್ರತಿಯೊಬ್ಬರೂ ಸತ್ಯಶುದ್ಧ ಕಾಯಕ ಮತ್ತು ದಾಸೋಹ ಮಾಡಬೇಕು. 12ನೇ ಶತಮಾನ ವಚನ ಸಾಹಿತ್ಯದ ಆರಂಭ. ನಂತರ ವಚನ ಸಾಹಿತ್ಯಕ್ಕೆ ಪ್ರಖರವಾದ ಶಕ್ತಿಯನ್ನು ತುಂಬಿದವರು 15ನೇ ಶತಮಾನದ ತೋಂಟದ ಸಿದ್ಧಲಿಂಗ ಯತಿಗಳು. ಪ್ರಗತಿಪರ, ಜನಪರ, ಸಮಾಜಪರ ಒಲವು ಇವು ವಚನಸಾಹಿತ್ಯದ ಮೂಲ ಕೊಡುಗೆಗಳು ಎಂದರು.

ಅವ್ವ ಸೇವಾ ಟ್ರಸ್ಟ್, ಗದಗ ಜಿಲ್ಲಾ ಕಾನಿಪದ ರಾಜ್ಯಮಟ್ಟದ ದತ್ತಿ ನಿಧಿ ಪ್ರಶಸ್ತಿ ಘೋಷಣೆ

# ಪತ್ರಕರ್ತೆ ಕೆ.ಎಚ್. ಸಾವಿತ್ರಿಗೆ ದತ್ತಿ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ




ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗಾಗಿ ಪ್ರಶಸ್ತಿ ನೀಡಲು ಸ್ಥಾಪಿಸಿರುವ ದತ್ತಿ ನಿಧಿಯ 2024ನೇ ಸಾಲಿನ ಪ್ರಶಸ್ತಿಗೆ ಹಿರಿಯ ಪತ್ರಕರ್ತೆ, ಸಿನಿ ಜೋಷ್ ಮಾಸಪತ್ರಿಕೆಯ ಪ್ರಧಾನ ಸಂಪಾದಕಿ ಬೆಂಗಳೂರಿನ ಕೆ.ಎಚ್. ಸಾವಿತ್ರಿ ಅವರನ್ನು ಆಯ್ಕೆ ಮಾಡಲಾಗಿದೆ.

ಆಯ್ಕೆ ಸಮಿತಿ ಅಧ್ಯಕ್ಷರೂ ಆಗಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಎಂ.ಹೆಬ್ಬಳ್ಳಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ದತ್ತಿ ಪ್ರಶಸ್ತಿಗೆ ಕೆ.ಎಚ್. ಸಾವಿತ್ರಿ ಅವರ ಹೆಸರನ್ನು ಅಂತಿಮಗೊಳಿಸಲಾಯಿತು.

ಪ್ರಶಸ್ತಿಯು 10 ಸಾವಿರ ರೂ. ನಗದು ಹಾಗೂ ಫಲಕವನ್ನು ಒಳಗೊಂಡಿದೆ. ಜುಲೈ 28ರಂದು ಗದಗನಲ್ಲಿ ವಾರ್ತಾ ಇಲಾಖೆ ಸಹಯೋಗದಲ್ಲಿ ನಡೆಯಲಿರುವ ಗದಗ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಘನ ಉಪಸ್ಥಿತಿಯಲ್ಲಿ ರಾಜ್ಯದ ಕಾನೂನು ಸಚಿವರೂ ಆಗಿರುವ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು 'ಮಾಧ್ಯಮ ಚೇತನ' ಎಂಬ ರಾಜ್ಯಮಟ್ಟದ ಪ್ರಶಸ್ತಿ ನೀಡಿ, ಗೌರವಿಸಲಿದ್ದಾರೆ.

ಆಯ್ಕೆ ಸಮಿತಿಯಲ್ಲಿ ಅವ್ವ ಸೇವಾ ಟ್ರಸ್ಟ್‌ನ ಸಂಚಾಲಕ ಡಾ.ಬಸವರಾಜ ಧಾರವಾಡ, ಆಯ್ಕೆ ಸಮಿತಿಯ ಸದಸ್ಯರಾದ ಪತ್ರಕರ್ತರಾದ ಸಂಜೀವ ಪಾಂಡ್ರೆ, ಶಿವಕುಮಾರ ಕುಷ್ಟಗಿ, ಕಾನಿಪ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಚ್.ಎಂ. ಶರೀಫನವರ ಇದ್ದರು ಎಂದು ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಕಟಣೆ ತಿಳಿಸಿದೆ.

# ನಿಧನ ವಾರ್ತೆ



**ಈಶ್ವರಗೌಡ ಹೊಳಲಪ್ಪಗೌಡ ಪಾಟೀಲ**

ಲಕ್ಷ್ಮೇಶ್ವರ: ಪಟ್ಟಣದ ಪೇಠಬಣದ ನಿವಾಸಿ, ಪ್ರಗತಿಪರ ರೈತ ಈಶ್ವರಗೌಡ ಹೊಳಲಪ್ಪಗೌಡ ಪಾಟೀಲ (60) ಇವರು ಬುಧವಾರ ಸಂಜೆ ನಿಧನರಾದರು. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಸೇರಿ ಅಪಾರ ಬಂಧು-ಬಳಗವಿದೆ.

# ಇನ್ನರ್ ವ್ಹೀಲ್ ಸಂಸ್ಥೆಯ ಸಾಮಾನ್ಯ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವ್ಹೀಲ್ ಸಂಸ್ಥೆ ಗದಗ-ಬೆಟಗೇರಿಯ ಮಾಸಿಕ ಸಮಾನ್ಯ ಸಭೆಯು ರೋಟರಿ ಐ ಕೇರ್ ಸೆಂಟರ್‌ನಲ್ಲಿ ಜರುಗಿತು. ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷೆ ನಾಗರತ್ನ ಮಾರನಬಸರಿ ವಹಿಸಿದ್ದರು. ಸಂಸ್ಥೆಯ ಮಾಜಿ ಅಧ್ಯಕ್ಷರು ಹಾಗೂ ಇನ್ನರ್ ವ್ಹೀಲ್ ಜಿಲ್ಲೆ 317ರ ಮಾಜಿ ಚೇರಮನ್ ಪ್ರೇಮಾ ಗುಳಗೌಡರ ಸಭೆಯನ್ನುದ್ದೇಶಿಸಿ ಮಾತನಾಡಿ, ಸಮಾಜಿಕ ಸೇವೆ ಹಾಗೂ ಶೈಕ್ಷಣಿಕ ಸೇವೆಗಳನ್ನು ನೀಡುವಲ್ಲಿ ಇನ್ನರ್ ವ್ಹೀಲ್ ಸಂಸ್ಥೆ ತನ್ನದೇ ಆದ ಮಹತ್ತರ ಪಾತ್ರ ವಹಿಸಿದೆ ಎಂದರು.




ಖಜಾಂಚಿ ಪೂಜಾ ಭೂಮಾರ 2024-25ನೇ ಸಾಲಿನ ಆಯ-ವ್ಯಯದ ಮುಂಗಡ ಪತ್ರ ಮಂಡಿಸಿದರು. ಐ.ಎಸ್.ಓ ಪುಷ್ಪಾ ಭಂಡಾರಿ ವಿವಿಧ ಸ್ಪರ್ಧೆಗಳ ಮಾಹಿತಿ ನೀಡಿದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ ಹಿಂದಿನ ಸಭೆಯದ ವಿಷಯ ಹಾಗೂ ಸಭೆಯ ನಡಾವಳಿಗಳನ್ನು ತಿಳಿಸಿದರು.

ರಾಜೇಶ್ವರಿ ಬಳ್ಳಾರಿ, ಶ್ರೇಯಾ ಪವಾಡಶೆಟ್ಟರ, ಸುಶೀಲಾ ಬಾಗಮಾರ, ಕಸ್ತೂರಿ ಹಿರೇಗೌಡರ, ಶಾಂತಾ ಗೌಡರ, ಶಾಂತಾ ನಿಂಬಣ್ಣವರ, ನಿಕಟಪೂರ್ವ ಅಧ್ಯಕ್ಷೆ ರಜನಿ ಪಾಟೀಲ, ಶಾಂತಾ ಮುಂದಿನಮನಿ, ಸವಿತಾ ಧರ್ಮಾಯತ, ಮೀನಾಕ್ಷಿ ಕೊರವಣ್ಣವರ, ಸಾಗರಿಕಾ ಅಕ್ಕಿ, ಅಶ್ವಿನಿ ಜಗತಾಪ, ನೀಲಾಂಬಿಕಾ ಉಗಲಾಟ, ಸುವರ್ಣಾ ವಸ್ತ್ರದ, ಸರೋಜಿನಿ ಆಲೂರ, ಮಂಜುಳಾ ಅಕ್ಕಿ, ಕಮಲಾ ಜಂಬಗಿ, ಅನ್ನಪೂರ್ಣ ವರವಿ ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಮಳಿಗೆಗಳ ದುರಸ್ಥಿಗೆ ಅವಕಾಶ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ 1988ರಲ್ಲಿ ಅಂಜುಮನ್-ಎ-ಇಸ್ಲಾಂ ಸಂಸ್ಥೆಗೆ ಪುರಸಭೆಯಿಂದ ದೇಸಾಯಿ ಬಣದ ಜಾಗೆಯನ್ನು ಮಂಜೂರ ಮಾಡಿದೆ. ಇದೀಗ ಅದರಲ್ಲಿ ನಿರ್ಮಿಸಲಾಗಿದ್ದ ಮಳಿಗೆಗಳು ಶಿಥಿಲಗೊಂಡಿರುವ ಹಿನ್ನೆಲೆಯಲ್ಲಿ ಅವುಗಳ ದುರಸ್ಥಿಗೆ ಅವಕಾಶ ಕಲ್ಪಿಸುವಂತೆ ಆಗ್ರಹಿಸಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಪಟ್ಟಣದ ಮುಸ್ಲಿಂ ಸಾರ್ವಜನಿಕರು ಹಾಗೂ ಮುಸ್ಲಿಂ ಸಂಘ-ಸಂಸ್ಥೆಗಳು ಮನವಿ ಸಲ್ಲಿಸಿದರು.



ಈ ವೇಳೆ ಮಾತನಾಡಿ ಮುಸ್ಲಿಂ ಸಮಾಜದ ಮುಖಂಡರು, 1988ರಲ್ಲಿ ಅಂಜುಮನ್-ಎ-ಇಸ್ಲಾಂ ಕಮಿಟಿಗೆ ಒಂದು ಕಾರ್ಯಾಲಯ ಹಾಗೂ 5 ಸಣ್ಣ ಮಳಿಗೆಗಳನ್ನು ಪುರಸಭೆ ಪರವಾನಿಗೆಯೊಂದಿಗೆ ನಿರ್ಮಿಸಿಕೊಳ್ಳಲಾಗಿದೆ. ಇದೀಗ ಮಳಿಗೆಗಳು ಶಿಥಿಲಗೊಂಡು ಬೀಳುವ ಹಂತಕ್ಕೆ ತಲುಪ್ಪಿದ್ದರಿಂದ ಪುರಸಭೆಯಿಂದ ಪರವಾನಿಗೆ ಪಡೆದು ದುರಸ್ಥಿ ಕಾರ್ಯ ಕೈಗೊಳ್ಳಲಾಗಿದೆ. ಆದರೆ ಕೆಲವು ಸಂಘಟನೆಗಳು ಸ್ಥಳಕ್ಕೆ ಬಂದು ದುರಸ್ತಿ ಕೆಲಸಕ್ಕೆ ಅಡ್ಡಿಪಡಿಸುತ್ತಿದ್ದಾರೆ. ಈ ರೀತಿಯ ನಡವಳಿಕೆ ಸರಿಯಲ್ಲ ಮತ್ತು ಇದರಿಂದ ಹಿಂದೂ-ಮುಸ್ಲಿಂ ಭಾಂದವರ ಸಾಮರಸ್ಯಕ್ಕೆ ಧಕ್ಕೆಯಾಗುತ್ತದೆ. ಆದ್ದರಿಂದ ಮಳಿಗೆ ದುರಸ್ಥಿ ಕಾರ್ಯಕ್ಕೆ ಆಗುತ್ತಿರುವ ಅಡ್ಡಿ ಸರಿಪಡಿಸಿ ಅವಕಾಶ ಕಲ್ಪಿಸಬೇಕು ಎಂದು ವಿನಂತಿಸಿದರು.

ಮನವಿ ಸ್ವೀಕರಿಸಿದ ಪುರಸಭೆ ಮುಖ್ಯಾಧಿಕಾರಿಗಳು ದಾಖಲೆ ಪರಿಶೀಲನೆ ಮಾಡಿ, ಮಾಹಿತಿ ಪಡೆದು ಸೂಕ್ತ ಕ್ರಮ ಕೈಗೊಳ್ಳುವದಾಗಿ ಹೇಳಿದರು. ಈ ಸಂದರ್ಭದಲ್ಲಿ ಮುಸ್ಲಿಂ ಸಮಾಜದ ಸಾರ್ವಜನಿಕರು, ಸಂಘ-ಸಂಸ್ಥೆಗಳ ಮುಖಂಡರು, ಯುವಕರು ಇದ್ದರು.

# ತರಬೇತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಕರ್ನಾಟಕ ಹಜ್ ಭವನದಲ್ಲಿ 10 ತಿಂಗಳ ವಸತಿ ಸಹಿತ ಐಎಎಸ್/ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುತ್ತಿದೆ. ಸದರಿ ತರಬೇತಿಗೆ ಅರ್ಹ ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ವಿದ್ಯಾರ್ಥಿಗಳು ಸೇವಾಸಿಂಧು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಆಗಸ್ಟ್ 31 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : 8277799990 ಕರೆ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಆಕ್ರೋಶ**

# ಬಜೆಟ್‌ನಲ್ಲಿ ಕರ್ನಾಟಕ ಜನತೆಗೆ ಚೊಂಬು



■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಕೇಂದ್ರ ಸರಕಾರವು ರಾಜ್ಯ ಸರಕಾರಕ್ಕೆ ಉಂಡೆನಾಮ ಹಾಕಿದ್ದರೆ, ಪ್ರಧಾನಿ ನರೇಂದ್ರ ಮೋದಿ, ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ರಾಜ್ಯದ ಯಾವುದೇ ಬೇಡಿಕೆಗಳಿಗೂ ಮನ್ನಣೆ ನೀಡದೇ, ರಾಜ್ಯದ ಹಿತವನ್ನು ಸಂಪೂರ್ಣವಾಗಿ ನಿರ್ಲಕ್ಷಿಸುವ ಮೂಲಕ ರಾಜ್ಯದ ಜನತೆಯ ಕೈಗೆ ಚೊಂಬು ಕೊಟ್ಟಿದ್ದಾರೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಕೇಂದ್ರ ಸರಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಜೆಟ್ ಪೂರ್ವ ಸಭೆಯಲ್ಲಿ ರಾಜ್ಯ ಸರ್ಕಾರ ಹಲವಾರು ಮನವಿಗಳನ್ನು ಮುಂದಿರಿಸಿತ್ತು. ಆದರೆ ಯಾವುದೇ ಬೇಡಿಕೆಗಳಿಗೂ ಕೇಂದ್ರ ಹಣಕಾಸು ಸಚಿವರು ಸ್ಪಂದಿಸಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ. ಅನುದಾನ ಒದಗಿಸುವುದಾಗಿ ಹಿಂದಿನ ಬಜೆಟ್‌ನಲ್ಲಿ ನಿರ್ಮಲಾ ಸೀತಾರಾಮ್ ಘೋಷಿಸಿದ್ದರು. ಆದರೆ ಈ ಯೋಜನೆಗೆ ನಯಾ ಪೈಸೆ ಒದಗಿಸಿಲ್ಲ. ಮಹಾದಾಯಿ ಯೋಜನೆ, ಮೇಕೆದಾಟು ಯೋಜನೆ, ಕೃಷ್ಣಾ ಮೇಲ್ದಂಡೆ ಯೋಜನೆಗಳ ಕುರಿತು ಬಜೆಟ್‌ನಲ್ಲಿ ಯಾವುದೇ ಪ್ರಸ್ತಾಪ ಮಾಡದೇ ರೈತರಿಗೆ ಮೋಸ ಮಾಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಪ್ರತೀ ವರ್ಷ 2 ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇವೆ ಎಂದು ಯುವಜನರ ಹಣೆಗೆ ನಾಮ ಬಳಿದು, ಈಗ ಪ್ರತಿ ವರ್ಷ ಕೇವಲ 75 ಲಕ್ಷ ಉದ್ಯೋಗ ಸೃಷ್ಟಿ ಮಾಡುತ್ತೇವೆ ಎನ್ನುತ್ತ ತಮ್ಮ ವೈಫಲ್ಯವನ್ನು ಒಪ್ಪಿಕೊಂಡಿದ್ದಾರೆ. ರೈತರ ಆದಾಯ ದ್ವಿಗುಣ ಆಗಲಿಲ್ಲ, ಗುಡಿಸಲು ಮುಕ್ತ ಭಾರತ ಆಗಲಿಲ್ಲ, 2 ಕೋಟಿ ಉದ್ಯೋಗ ಸೃಷ್ಟಿ ಆಗಲಿಲ್ಲ, 370 ಕಾಯಿದೆ ಮೂಲಕ ವಿಶೇಶ ಸ್ಥಾನಮಾನ ನೀಡಿದ ಜಮ್ಮು ಕಾಶ್ಮೀರ ಉಗ್ರಗಾಮಿ ಮುಕ್ತ ರಾಜ್ಯವಾಗಲಿಲ್ಲ ಜೊತೆಗೆ ದೇಶದ ಪ್ರತಿ ಮನೆಗೂ ಕರೆಂಟ್ ಬರಲಿಲ್ಲ ಎಂದು ಕೇಂದ್ರ ಸರಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಪ್ರಸಕ್ತ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಬಿಹಾರ ಮತ್ತು ಆಂಧ್ರಕ್ಕೆ ಸಿಂಹಪಾಲು ಅನುದಾನ ನೀಡಿದೆ. ಸರ್ಕಾರ ಬೀಳುವ ಭಯದಲ್ಲಿ ನಡುಗಿ ಅನುದಾನ ನೀಡಿದ ಪ್ರಧಾನಿ ಮೋದಿ ಅವರು ಬಿಹಾರಕ್ಕೆ ವಿವಿಧ ರಸ್ತೆ ಯೋಜನೆಗಳಿಗೆ 26,000 ಕೋಟಿ ರೂ ಅನುದಾನ ಮತ್ತು ಆಂಧ್ರಕ್ಕೆ ಸುಮಾರು 15,000 ಕೋಟಿ ಅನುದಾನ ನೀಡಿದೆ. ಇದರ ನಡುವೆ ಕರ್ನಾಟಕ ರಾಜ್ಯವನ್ನು ಸಂಪೂರ್ಣವಾಗಿ ಕಡೆಗಣಿಸಿದೆ ಎಂದು ಆರೋಪಿಸಿದ್ದಾರೆ.

**ಜೆಡಿಎಸ್ ಜಿಲ್ಲಾಧ್ಯಕ್ಷ ಮುಧೋಳ ಆಕ್ರೋಶ**

# ಬಡವರ ಕಷ್ಟಕ್ಕೆ ಸ್ಪಂದಿಸದ ರಾಜ್ಯ ಸರ್ಕಾರ



■ವಿಜಯಸಾಕ್ಷಿ ಸುದ್ದಿ, ನರೇಗಲ್

ರಾಜ್ಯದಲ್ಲಿ ಕಳೆದ ಕೆಲ ದಿನಗಳಿಂದ ಧಾರಾಕಾರವಾಗಿ ಮಳೆ ಸುರಿಯುತ್ತಿದ್ದು, ಅನೇಕ ಕಡೆ ಪ್ರವಾಹದ ಭೀತಿ ಎದುರಾಗಿದೆ. ಆದರೂ ರಾಜ್ಯ ಸರ್ಕಾರ ಇದೆಲ್ಲವನ್ನು ನಿರ್ಲಕ್ಷಿಸುತ್ತಿದೆ. ಅಲ್ಲದೆ ಬಡವರ ಕಷ್ಟಕ್ಕೆ ಸ್ಪಂದಿಸದ ಈ ಸರಕಾರ ಅಧಿಕಾರದಲ್ಲಿರಲು ಸಮರ್ಥವಿಲ್ಲ ಎಂದು ಗದಗ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಎಂ.ವೈ. ಮುಧೋಳ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಂತಹ ಪ್ರವಾಹದಿಂದ ಬಡವರ ಜೀವನ ಅಧೋಗತಿಗೆ ತಲುಪಿದೆ ಮತ್ತು ಗುಡ್ಡ ಕುಸಿತದಿಂದ ಅಂಕೋಲಾದ ಶಿರೂರಿನಲ್ಲಿ ಸಾಕಷ್ಟು ಜನ ಪ್ರಾಣ ಕಳೆದುಕೊಂಡಿದ್ದಾರೆ.

ಇಂತಹ ಸಮಯದಲ್ಲಿ ರಾಜ್ಯ ಸರಕಾರ ವಿಧಾನಸಭೆ ಕಲಾಪದಲ್ಲಿ ಕಾಲ ಹರಣ ಮಾಡುತ್ತಾ ಬಡವರ ಕಷ್ಟಕ್ಕೆ ಬಾರದೆ ಕುಳಿತುಕೊಂಡಿದೆ.

ನಮ್ಮ ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿಯವರು ತಮ್ಮ ಜವಾಬ್ದಾರಿಯನ್ನು ನಿಭಾಯಿಸುತ್ತಾ ಹಾನಿಗೊಳಗಾದ ಪ್ರದೇಶಗಳಿಗೆ ಮತ್ತು ಗುಡ್ಡ ಕುಸಿತವಾದ ಪ್ರದೇಶಕ್ಕೆ ಭೇಟಿ ನೀಡಿ ಘಟನೆಯಲ್ಲಿ ಜೀವ ಕಳೆದುಕೊಂಡ ಕುಟುಂಬದ ಸದಸ್ಯರೊಂದಿಗೆ ಚರ್ಚಿಸಿ ಧೈರ್ಯ ತುಂಬಿದ್ದಾರೆ.

ಕೇಂದ್ರ ಸರ್ಕಾರದ ಯಾವುದಾದರೂ ಒಂದು ಇಲಾಖೆಯಲ್ಲಿ ನೌಕರಿಯ ಭರವಸೆಯನ್ನು ನೀಡಿರುವುದು ಮಾನವಿಯ ಮೌಲ್ಯಗಳಿಗೆ ಹಾಗೂ ಸಾರ್ವಜನಿಕರ ಬಗ್ಗೆ ಎಚ್‌ಡಿಕೆ ಕಾಳಜಿ ಹೊಂದಿರುವುದನ್ನು ತಿಳಿಸುತ್ತದೆ ಎಂದು ಹೇಳಿದ್ದಾರೆ.

ಕುಮಾರಸ್ವಾಮಿಯವರ ಭೇಟಿಯ ಬಳಿಕ ಎಚ್ಚೆತ್ತುಕೊಂಡ ರಾಜ್ಯ ಸರ್ಕಾರ, ಮುಖ್ಯಮಂತ್ರಿಗಳು ಹಾಗೂ ಸಂಪುಟ ಸಚಿವರೊಂದಿಗೆ ಭೇಟಿ ನೀಡಿರುವುದು ಹಾಸ್ಯಾಸ್ಪದದ ಸಂಗತಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಹಿತ್ಯ ಅಕಾಡೆಮಿಯು 2023ನೇ ವರ್ಷದಲ್ಲಿ ಪ್ರಥಮವಾಗಿ ಮುದ್ರಣವಾಗಿ ಪ್ರಕಟಗೊಂಡಿರುವ ಸಾಹಿತ್ಯದ ವಿವಿಧ ಪ್ರಕಾರಗಳ ಕೃತಿಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ. ಲೇಖಕರು, ಪ್ರಕಾಶಕರು, ಸಾಹಿತ್ಯಾಸಕ್ತ ಸಾರ್ವಜನಿಕರು ನಾಲ್ಕು ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು-560 002 ಈ ವಿಳಾಸಕ್ಕೆ ರಿಜಿಸ್ಟರ್ಡ್ ಅಂಚೆ/ ಕೋರಿಯರ್ ಮೂಲಕ ಅಥವಾ ಖುದ್ದಾಗಿ 2024ರ ಆಗಸ್ಟ್ 31 ರೊಳಗೆ ತಲುಪುವಂತೆ ಕಳುಹಿಸಬೇಕು. ಹೆಚ್ಚಿನ ವಿವರಗಳಿಗೆ ಅಕಾಡೆಮಿಯ ವೆಬ್‌ಸೈಟ್‌ನ್ನು www.sahithyaacademy.karnataka.gov.in ಸಂಪರ್ಕಿಸಬಹುದಾಗಿದೆ.

**ಪುರಸಭೆ, ತಾ.ಪಂಗೆ ಲೋಕಾಯುಕ್ತ ಡಿವೈಎಸ್ಪಿ ಬಿರಾದಾರ ದಿಢೀರ್ ಭೇಟಿ, ಕಡತಗಳ ಪರಿಶೀಲನೆ**

# ತಪ್ಪು ಮಾಹಿತಿ ನೀಡಿದರೆ ಕ್ರಮ ಎದುರಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಪುರಸಭೆ ಕಾರ್ಯಾಲಯಕ್ಕೆ ಗುರುವಾರ ದಿಢೀರ್ ಭೇಟಿ ನೀಡಿ, ವಿಲೇವಾರಿಯಾಗದ ಕಡತಗಳ ಪರಿಶೀಲನೆ, ಜನನ-ಮರಣ ಮಾಹಿತಿ ಸೇರಿದಂತೆ ಪುರಸಭೆ ಆವರಣದಲ್ಲಿ ನಿಂತಿದ್ದ ವಾಹನಗಳ ಪರಿಶೀಲನೆ, ಮಳಿಗೆಗಳ ಬಗ್ಗೆ ಜಿಲ್ಲಾ ಲೋಕಾಯುಕ್ತ ಡಿವೈಎಸ್ಪಿ ವಿಜಯ ಬಿರಾದಾರ ಮಾಹಿತಿ ಪಡೆದರು.

ಪಟ್ಟಣದ ಪುರಸಭೆ ಆವರಣದಲ್ಲಿ ನಿಂತಿದ್ದ ವಾಹನಗಳ ಪರಿಶೀಲನೆ ವೇಳೆ ಪುರಸಭೆಯ ವಾನಹಗಳು ಸುಸ್ಥಿತಿಯಲ್ಲಿರುವುದರ ಜತೆಗೆ ಚಾಲಕರು ಕಡ್ಡಾಯವಾಗಿ ವಾಹನ ಚಾಲನಾ ಪರವಾನಿಗೆ ಹೊಂದಿರಬೇಕು. ಕೆಟ್ಟು ನಿಂತಿದ್ದ ವಾಹನಗಳನ್ನು ಗುಜರಿಗೆ ಹಾಕುವ ಮುನ್ನ ಆರ್‌ಟಿಒ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಸಕಾಲದಲ್ಲಿ ಅವಧಿ ಮೀರಿದರೂ ಸಹ ಕಡತಗಳ ವಿಲೇವಾರಿ ಆಗದಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿ, ತ್ವರಿತಗತಿಯಲ್ಲಿ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಸಾರ್ವಜನಿಕರು ಸಮಸ್ಯೆಗಳ ಪರಿಹಾರಕ್ಕೆ ಅಲೆಯದಂತೆ



ಕರ್ತವ್ಯ ನಿರ್ವಹಿಸಿ ಎಂದು ಸೂಚಿಸಿದರು.

ಪಟ್ಟಣದಲ್ಲಿ ನಿರ್ಮಾಣವಾಗುವ ಬಡಾವಣೆಯಲ್ಲಿ ನಿವೇಶನಗಳ ಮಾರಾಟ ಮಾಡಲು ಕಡ್ಡಾಯವಾಗಿ ವಿದ್ಯುತ್ ಕಂಬ, ಚರಂಡಿ ನೀರಿನ, ನೀರಿನ ಸಂಪರ್ಕ ಸೇರಿ ಅಗತ್ಯ ಮೂಲಸೌಕರ್ಯಗಳು ಹೊಂದಿರಬೇಕು. ಹೀಗಾಗಿ ಪಟ್ಟಣದಲ್ಲಿನ ಒಟ್ಟು ಬಡಾವಣೆಗಳ ಮಾಹಿತಿ ಹಾಗೂ ಅಭಿವೃದ್ಧಿ ಹೊಂದದ ಸಮಗ್ರ ಮಾಹಿತಿಯನ್ನು ನೀಡುವುದರ ಜತೆಗೆ ಯಾವ ವರ್ಷದಲ್ಲಿ ಎಷ್ಟು ನಿವೇಶನಗಳ ಮಾರಾಟವಾಗಿದೆ, ಅಧಿಕಾರಿಗಳು ಯಾರಿದ್ದರು ಎಂಬ ಕುರಿತ ಲಿಖಿತ ಮಾಹಿತಿಯನ್ನು ಕಚೇರಿಗೆ ರವಾನಿಸಬೇಕು. ಅಧಿಕಾರಿಗಳು ನೀಡುವ ಮಾಹಿತಿ ಬಗ್ಗೆ ಸಾರ್ವಜನಿಕರಿಂದ ಲೋಕಾಯುಕ್ತ ಕಚೇರಿಯಿಂದ ಪರಿಶೀಲನೆ ನಡೆಸಿದಾಗ ಅಧಿಕಾರಿಗಳು ತಪ್ಪು ಮಾಹಿತಿ ನೀಡಿದ್ದು ತಿಳಿದುಬಂದರೆ ಕಾನೂನಿನ ಕ್ರಮವನ್ನು ಎದುರಿಸಲು ಪುರಸಭೆ ಅಧಿಕಾರಿಗಳು ಸಿದ್ಧವಾಗಿರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪಟ್ಟಣದ ಘನತ್ಯಾಜ್ಯ ಘಟಕಕ್ಕೆ ಭೇಟಿ ನೀಡಿದ ಲೋಕಾಯುಕ್ತ ಡಿವೈಎಸ್ಪಿ ವಿಜಯ ಬಿರಾದಾರ, ಘಟಕಕ್ಕೆ ಬರುವ ವಾಹನಗಳ ಮಾಹಿತಿ ನೋಂದಣಿ ಪುಸಕ್ತದ ಬಗ್ಗೆ ವಿಚಾರಿಸಿದರು. ಘಟಕದಲ್ಲಿ ತ್ಯಾಜ್ಯ ವಿಲೇವಾರಿ ಜತೆಗೆ ಪುರಸಭೆಗೆ ಆದಾಯ ಬರುವ ನಿಟ್ಟಿನಲ್ಲಿ ಕೆಲಸವನ್ನು ನಿರ್ವಹಿಸಬೇಕು. ಮುಕ್ತಿ ವಾಹನದ ಬಾಡಿಗೆ ಎಷ್ಟು, ಮೇ ಹಾಗೂ ಜೂನ್ ತಿಂಗಳಲ್ಲಿ ಎಷ್ಟು ಬಾರಿ ಹೋಗಿದೆ ಎಂಬುದುರ ಮಾಹಿತಿ ಕೇಳಿದಾಗ ಪುರಸಭೆ ಅಧಿಕಾರಿಗಳು ನಿರುತ್ತರರಾದರು. ಇದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಲೋಕಾಯುಕ್ತ ಡಿವೈಎಸ್ಪಿ, ಮುಕ್ತಿ ವಾಹನಕ್ಕೆ ಪುರಸಭೆ ಅಧಿಕಾರಿಗಳ ದೂರವಾಣಿ ಸಂಖ್ಯೆ ಹಾಗೂ ಮುಕ್ತಿ ವಾಹನದ ಬಗ್ಗೆ ಪ್ರಚಾರ ಮಾಡಿ ಎಂದರು.

ಇದಕ್ಕೂ ಮುನ್ನ ಪಟ್ಟಣದ ತಾಲೂಕು ಪಂಚಾಯಿತಿ ಕಾರ್ಯಾಲಯಕ್ಕೆ ಭೇಟಿ ನೀಡಿದ ಅವರು, ವಿವಿಧ ಕಡತಗಳ ಪರಿಶೀಲನೆ ಜತೆಗೆ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು, ಗ್ರಾಮಗಳ ಅಭಿವೃದ್ಧಿಗೆ ಪೂರಕವಾದ ಯೋಜನೆಗಳು ಹಾಗೂ ಸಾರ್ವಜನಿಕರು ನೀಡುವ ಮಾಹಿತಿಗೆ ತಾ.ಪಂ ಅಧಿಕಾರಿಗಳು ಸ್ಪಂದಿಸಿ ಪರಿಹಾರ ಒದಗಿಸಲು ಮುಂದಾಗಬೇಕು ಎಂದರು.

**ದಿ. ಬಿ.ಜಿ. ಅಣ್ಣಿಗೇರಿ ಗುರುಗಳ 94ನೇ ಜಯಂತಿ-ಪ್ರತಿಭಾ ಪುರಸ್ಕಾರದಲ್ಲಿ ತೋಂಟದ ಶ್ರೀಗಳು**

# ಶಿಕ್ಷಣದಿಂದ ಬಾಳಿಗೆ ಬೆಳಕು

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣವು ಬಾಳಿಗೆ ಬೆಳಕಾಗಬಲ್ಲದು. ಶಿಕ್ಷಣದಿಂದ ಮನುಷ್ಯ ಉನ್ನತಿಗೇರಬಲ್ಲ. ಇಂತಹ ಶಿಕ್ಷಣವನ್ನು ಮಕ್ಕಳಿಗೆ ನೀಡುವಲ್ಲಿ ತಮ್ಮ ಬದುಕನ್ನೇ ಸಮರ್ಪಿಸಿಕೊಂಡ ದಿ. ಬಿ.ಜಿ. ಅಣ್ಣಿಗೇರಿ ಗುರುಗಳು ಸದಾಕಾಲ ಸ್ಮರಣೀಯರಾಗಿದ್ದಾರೆ ಎಂದು ಗದುಗಿನ ಜ.ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.



ಅವರು ನಗರದ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ಗದಗ ತಾಲೂಕಿನ ಸರಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ, ಬಿ.ಜಿ. ಅಣ್ಣಿಗೇರಿ ಗುರುಗಳ 94ನೇ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಅಣ್ಣಿಗೇರಿ ಗುರುಗಳ ಶಿಷ್ಯ ಸಮೂಹ ಅವರ ಮಾದರಿ ಬದುಕಿಗೆ, ಅವರ ವಿಶಿಷ್ಠ ವ್ಯಕ್ತಿತ್ವಕ್ಕೆ ತಲೆದೂಗಿದ್ದು, ಸರಕಾರಿ ಶಾಲೆಗಳ ಪ್ರತಿಭಾನ್ವಿತ ಮಕ್ಕಳಿಗೆ ಅವರ ಹೆಸರಿನಲ್ಲಿ ಪುರಸ್ಕಾರ ನೀಡಿ ಗೌರವ ಸಲ್ಲಿಸಲು ಪ್ರತಿಷ್ಠಾನದ ಮುಂದಾಗಿರುವದು ಶ್ಲಾಘನೀಯ ಎಂದರು.

ಪ್ರತಿ ವರ್ಷ ಪ್ರತಿಭಾ ಪುರಸ್ಕಾರ ನೀಡುತ್ತ ಬಂದಿರುವ ಪ್ರತಿಷ್ಠಾನಕ್ಕೆ ಇದೀಗ ದಾನಿಗಳೂ ಕೈ ಜೋಡಿಸಿ ಪ್ರತಿಭಾನ್ವಿತ ಮಕ್ಕಳಿಗೆ ಪ್ರೋತ್ಸಾಹಿಸುತ್ತಿರುವದು ಅಭಿನಂದನೀಯ. ಪ್ರತಿಷ್ಠಾನವು ಅಣ್ಣಿಗೇರಿ ಅವರ ಹೆಸರಿನಲ್ಲಿ ಪ್ರತಿ ವರ್ಷ ಹಿರಿಯ ಸಾಧಕ ಶಿಕ್ಷಕರಿಗೆ ರಾಜ್ಯ-ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿ ನೀಡುವ ಮೂಲಕ ಹಾಗೂ ಅಣ್ಣಿಗೇರಿ ಅವರ ಆದರ್ಶ ಬದುಕನ್ನು ಪಠ್ಯಕ್ರಮದಲ್ಲಿ ಅಳವಡಿಸುವ ಮೂಲಕ ಅವರನ್ನು ಸದಾ ಸ್ಮರಿಸುವಂತೆ ಮಾಡುವ ಕಾರ್ಯ ಆಗಬೇಕೆಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಗ್ರಾಮೀಣ ಬಿಇಓ ವ್ಹಿ.ವ್ಹಿ. ನಡುವಿನಮನಿ, ಶಹರ ಬಿಇಓ ಆರ್.ಎಸ್.ಬುರಡಿ, ವೈದ್ಯರಾದ ಡಾ. ಸಿ.ಸೊಲೋಮನ್, ನಿವೃತ್ತ ಪ್ರಾಚಾರ್ಯ ಸಿದ್ದು ಯಾಪಲಪರವಿ ಅವರು ಅಣ್ಣಿಗೇರಿ ಗುರುಗಳ ಬದುಕು, ಶಿಕ್ಷಣಕ್ಕೆ ಸಲ್ಲಿಸಿದ ಸೇವೆ ಹಾಗೂ ಅವರ ತರುವಾಯ ಗುರುಕುಲ ಆಶ್ರಮ, ಪ್ರತಿಷ್ಠಾನದ ಕಾರ್ಯವೈಖರಿಯನ್ನು ಕೊಂಡಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಮಾತನಾಡಿ, ಅಣ್ಣಿಗೇರಿ ಗುರುಗಳ ಸೇವೆ, ಪ್ರತಿಷ್ಠಾನದ ನಡೆದ ಬಂದ ದಾರಿ ವಿವರಿಸಿದರು.

ವೇದಿಕೆ ಮೇಲೆ ಬಸವರಾಜ ಬಿಂಗಿ, ಡಾ. ಜಿ.ಬಿ. ಪಾಟೀಲ, ರವಿ ದಂಡಿನ, ಶಂಕ್ರಪ್ಪ ಅಣ್ಣಿಗೇರಿ ಉಪಸ್ಥಿತರಿದ್ದರು. ಕೆ.ಎಸ್. ಕುರ್ತಕೋಟಿ ಸ್ವಾಗತಿಸಿ ನಿರೂಪಿಸಿ ಪರಿಚಯಿಸಿದರು. ಶಂಕ್ರಪ್ಪ ಅಣ್ಣಿಗೇರಿ ವಂದಿಸಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಗದುಗಿನ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯ ಸೃಷ್ಟಿ ಸೆಂಡಿಗಿ, ಸಹನಾ ಕಟಗೇರಿ, ಭಾವನಾ ಕಟಗಿ, ಷಣ್ಮುಖ ಲಕ್ಕಣ್ಣವರ, ಕಸ್ತೂರಿ ನಾಯ್ಕರ್, ಗದುಗಿನ ಸರಕಾರಿ ಉರ್ದು ಪ್ರೌಢಶಾಲೆಯ ಶಾಹಿಸ್ತಾ ಅಕ್ಕಿಆಲೂರ, ಫರ್ನಾಜ್ ಮುಳಗುಂದ, ಬತೂಲ್ ಮಕಾನದಾರ, ಅತಿಯಾ ಗುಳಗುಂದಿ, ಜೋಯಾ ಕಿತ್ತೂರ ಹಾಗೂ ಗದುಗಿನ ಗಾಂಧಿ ನಗರದ ಸರಕಾರಿ ಪ್ರೌಢಶಾಲೆಯ ಬಿರೇಶ್ ಪೂಜಾರ, ನವೀನ ಸಕ್ಕರಗೌಡ್ರ, ಸುದೀಪ್ ಉಪ್ಪಾರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧರು, ಸಿಖ್ಖ ಜನಾಂಗದವರಿಗೆ ನಿಗಮದಿಂದ ಎನ್‌ಎಂಡಿಎಫ್‌ಸಿ ಮಾದರಿಯಲ್ಲಿ ವಿದೇಶದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಿದೇಶಿ ಸಾಲ ಯೋಜನೆಯಡಿ ವಿದ್ಯಾಭ್ಯಾಸ ಸಾಲಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2024-25ನೇ ಸಾಲಿಗೆ ಎನ್‌ಎಡಿಎಫ್‌ಸಿ ಮಾದರಿಯಲ್ಲಿ ವಿದೇಶದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಮತ್ತು ಮಾನ್ಯತೆ ಪಡೆದಿರುವ ಯಾವುದೇ ವಿದೇಶ ವಿಶ್ವವಿದ್ಯಾಲಯದಿಂದ, ಭಾರತ ದೇಶದ ಪ್ರತಿಷ್ಠಿತ ಐಐಟಿ, ಐಐಎಂಎಸ್, ಐಎಸ್‌ಸಿ, ಸಂಸ್ಥೆಗಳಲ್ಲಿ ಪದವಿ/ ಸ್ನಾತಕೋತ್ತರ ಪದವಿ ಮಾಡಬಯಸುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದೇಶಿ ವಿದ್ಯಾಭ್ಯಾಸ ( ಓವರ್ ಸೀಸ್ ಎಜ್ಯುಕೇಷನ್) ಸಾಲ ಯೋಜನೆಯಡಿ ಸಾಲ ಪಡೆಯಲು ಅಪೇಕ್ಷಿಸುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ನಿಗಮದ ವೆಬ್‌ಸೈಟ್ https://kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಲು ಆಗಸ್ಟ್ 31ಕೊನೆಯ ದಿನವಾಗಿದೆ.

ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿನಿಗಮ, ನಿಯಮಿತ ಮೌಲಾನಾ ಆಜಾದ ಅಲ್ಪಸಂಖ್ಯಾತರ ಭವನ 1ನೇ ಮಹಡಿ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ಈ ಕಚೇರಿಗೆ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ. 08372-295147 ಸಂಪರ್ಕಿಸಬಹುದಾಗಿದೆ.

# ಮಹಾಸಭಾದ ಬಲವರ್ಧನೆಗೆ ಸಹಕರಿಸಿ




■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕವನ್ನು ಇನ್ನಷ್ಟು ಬಲವರ್ಧನೆಗೊಳಿಸಲು ಸರ್ವರ ಸಹಕಾರ ಅಗತ್ಯವಾಗಿದೆ ಎಂದು ಮಹಾಸಭಾದ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.

ಅವರು ಗದುಗಿನ ವೀರಶೈವ ಲೈಬ್ರರಿಯಲ್ಲಿ ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕದ ಕಾರ್ಯಾಲಯದಲ್ಲಿ ಏರ್ಪಡಿಸಿದ್ದ ಮಹಾಸಭಾದ ಚುನಾವಣೆಯಲ್ಲಿ ಕಾರ್ಯಕಾರಿ ಮಂಡಳಿಗೆ ಅವಿರೋಧವಾಗಿ ಆಯ್ಕೆಯಾದವರಿಗೆ ಘೋಷಣಾ ಪತ್ರ ವಿತರಣಾ ಔಪಚಾರಿಕ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಾಸಭಾದ ಕಟ್ಟಡ ನಿರ್ಮಾಣ ಕಾರ್ಯ ಚುರುಕುಗೊಳಿಸುವ, ಆಜೀವ ಸದಸ್ಯರ ಸಂಖ್ಯೆ ಹೆಚ್ಚಿಸುವ ಮೂಲಕ ಸಮಾಜವನ್ನು ಸಂಘಟನಾತ್ಮಕವಾಗಿ ಕಟ್ಟುವ ಕಾರ್ಯ, ಸಮಾಜ ಚಿಂತನೆ ಸೇರಿದಂತೆ ಪದಾಧಿಕಾರಿಗಳ, ಹಿರಿಯರಿಂದ ಬರುವ ಸಲಹೆ ಸೂಚನೆಗಳನ್ನು ಅನುಸರಿಸಿಕೊಂಡು ಮುನ್ನಡೆಯುವದಾಗಿ ಹೇಳಿದರು.

ಮಹಾಸಭಾದ ಉಪ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ ಸಮಾಜದ ಹಿರಿಯರಾದ ಬಸವರಾಜ ಬಿಳೇಯಲಿ ಅವರು ಅವಿರೋಧವಾಗಿ ಆಯ್ಕೆಯಾದ ಎಲ್ಲ ಕಾರ್ಯಕಾರಿ ಮಂಡಳಿಯವರಿಗೆ ಪ್ರಮಾಣಪತ್ರ ವಿತರಿಸಿ, ಎಲ್ಲರೂ ಒಗ್ಗಟ್ಟಿನಿಂದ ಒಳ್ಳೆಯ ರೀತಿಯಲ್ಲಿ ಕೆಲಸ ಮಾಡಿ ಮಹಾಸಭಾದ, ಸಮಾಜದ ಘನತೆ ಗೌರವನ್ನು ಹೆಚ್ಚಿಸಬೇಕೆಂದು ಸಲಹೆ ನೀಡಿದರು.

ಸದಾಶಿವಯ್ಯ ಮದರಿಮಠದ ಮಾತನಾಡಿ, ಮಹಾಸಭಾದ ಕಟ್ಟಡ ನಿರ್ಮಾಣ ಕಾರ್ಯದ ಕುರಿತು ಮುಂದಿನ ವಾರದ ಕರೆಯಲಾಗುವ ಸಭೆಯಲ್ಲಿ ರೂಪುರೇಷೆಗಳನ್ನು ತಿಳಿಸುವದಾಗಿ ಹೇಳಿದರು. ಸಂಶಿಮಠ ಹಾಗೂ ಬಸವರಾಜ ಕೊರ್ಲಹಳ್ಳಿ ಅವರು ಮಾತನಾಡಿದರು.

ಎಸ್.ವ್ಹಿ. ಜೀವನಗೌಡ್ರ, ಮುತ್ತನಗೌಡ ತೇಜಿಗೌಡ್ರ, ಮಲ್ಲಿಕಾರ್ಜುನಗೌಡ ಮಲ್ಲಾಪೂರ, ಬಸವರಾಜ ಅಂಗಡಿ, ಶ್ರೀಶೈಲಪ್ಪ ಚಳಗೇರಿ, ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ, ಪ್ರಭಾತಕುಮಾರ ನಾರಾಯಣಪೂರ, ಭೀಮರಡ್ಡೆಪ್ಪ ರಡ್ಡೇರ, ವೆಂಕಪ್ಪ ಬಂಗಾರಿ, ಮಂಜುನಾಥ ವ್ಯಾಗೇರಿ, ಚನ್ನವೀರಪ್ಪ ಹುಣಸಿಕಟ್ಟಿ, ಚಂದ್ರಗೌಡ ಪಾಟೀಲ, ಚನ್ನಬಸಪ್ಪ ಕಂಠಿ, ಮುರುಘರಾಜೇಂದ್ರ ಬಡ್ನಿ, ಶಿವರಾಜಗೌಡ ಹಿರೇಮನಿಪಾಟೀಲ, ಕಾಶಪ್ಪ ಗದಗಿನ, ಬಾಪುಜಿ ಪಾಟೀಲ, ಶಿವಪ್ಪ ಅಂಕದ, ವಿಜಯಾನಂದ ಮುತ್ತಿನಪೆಂಡಿಮಠ, ಶಂಭು ಕಾರಕಟ್ಟಿ, ಉಮಾದೇವಿ ಕಾತರಕಿ, ಸುರೇಖಾ ಪಿಳ್ಳೆ, ಸುಪರ್ಣಾ ಬ್ಯಾಹಟ್ಟಿ, ಮಂಜುಳಾ ರೇವಡಿ, ನಿರ್ಮಲಾ ಚಿಕ್ಕನಗೌಡ್ರ, ಉಮಾವತಿ ನಾಯ್ಕರ್, ವಿಜಯಲಕ್ಷ್ಮೀ ಮಾನ್ವಿ, ಜಯಶ್ರೀ ಉಗಲಾಟದ, ಸುವರ್ಣಾ ಶೆಲ್ಲಿಕೇರಿ ಕಾರ್ಯಕಾರಿ ಮಂಡಳಿಯ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಗೊಂಡವರಿಗೆ ಪ್ರಮಾಣಪತ್ರ ನೀಡಿದರು.

ಸಮಾರಂಭದಲ್ಲಿ ಸಮಾಜದ ಗಣ್ಯರು, ಹಿರಿಯರು ಉಪಸ್ಥಿತರಿದ್ದು ಸಲಹೆ-ಸೂಚನೆ ನೀಡಿದರು.

# ಪಟ್ಟಣದ ಅಭಿವೃದ್ಧಿಗೆ ಸಹಕಾರ ನೀಡಿ



■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಅಭಿವೃದ್ಧಿ ಹಾಗೂ ಸೌಂದರ್ಯದ ದೃಷ್ಟಿಯಿಂದ ರಸ್ತೆ ಅಗಲೀಕರಣ ಅತ್ಯಗತ್ಯವಾಗಿದ್ದು, ವ್ಯಾಪಾರಸ್ಥರ ಮತ್ತು ಸಾರ್ವಜನಿಕರ ಸಹಕಾರ ಅವಶ್ಯಕವಾಗಿದೆ ಎಂದು ಸಿಪಿಐ ಎಸ್.ಎಸ್. ಬಿಳಗಿ ಹೇಳಿದರು.

ಅವರು ಗುರುವಾರ ಪೊಲೀಸ್ ಠಾಣೆಯಲ್ಲಿ ಬೀದಿಬದಿ ವ್ಯಾಪಾರಸ್ಥರ ಸಭೆಯನ್ನು ಆಯೋಜಿಸಿ ಮಾತನಾಡಿದರು.

ರೋಣ ಪಟ್ಟಣ ಅಭಿವೃದ್ಧಿಯತ್ತ ಸಾಗಬೇಕು ಎನ್ನುವುದು ಎಲ್ಲರ ಇಚ್ಛೆಯಾಗಿದ್ದು, ರಸ್ತೆ ಅಗಲೀಕರಣವಾದಾಗ ಮಾತ್ರ ಶಹರ ಪ್ರದೇಶಗಳು ಪ್ರಗತಿಯತ್ತ ಸಾಗಲು ಅನುಕೂಲವಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಸಮಸ್ಯೆಗಳು ಉದ್ಭವಿಸುವುದು ಸಹಜವಾದರೂ, ಅಭಿವೃದ್ಧಿಗೆ ಕೈಜೋಡಿಸುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ ಎನ್ನುವುದನ್ನು ಮರೆಯಬಾರದು ಎಂದರು.

ಮುಖ್ಯವಾಗಿ ರಸ್ತೆ ಅಗಲೀಕರಣದ ಸಮಯದಲ್ಲಿ ಬೀದಿಬದಿ ವ್ಯಾಪರಸ್ಥರಿಗೆ ವಹಿವಾಟು ನಡೆಸಲು ಬೇರೆ ಕಡೆಗಳಲ್ಲಿ ಸ್ಥಳಾವಕಾಶ ಮಾಡಿಕೊಡಲು ಈಗಾಗಲೇ ಸಿದ್ಧತೆ ಮಾಡಲಾಗಿದೆ ಎಂಬುದನ್ನು ವಿವರಿಸಿದ ಅವರು, ಇನ್ನುಮುಂದೆ ನಿಯಮಗಳನ್ನು ಮೀರಿ ಯಾರೂ ನಡೆದುಕೊಳ್ಳುವಂತಿಲ್ಲ ಎಂಬ ಸೂಚನೆಯನ್ನು ನೀಡಿದರು.

ಸಭೆಯ ನಂತರ ಸಿಪಿಐ ಎಸ್.ಎಸ್. ಬಿಳಗಿಯವರು ಎಲ್ಲ ಅಂಗಡಿಗಳ ಮಾಲಿಕರಿಗೆ ರಸ್ತೆ ಬದಿಯಲ್ಲಿಟ್ಟಿರುವ ವಸ್ತುಗಳನ್ನು ತೆಗೆದುಕೊಳ್ಳಬೇಕು ಹಾಗೂ ರಸ್ತೆ ಅಗಲೀಕರಣ ಸಂದರ್ಭದಲ್ಲಿ ಸಹಕಾರ ನೀಡಬೇಕು ಎಂದು ಸಲಹೆ ನೀಡಿದರು. ಇದೇ ಸಂಧರ್ಭದಲ್ಲಿ ವಾಹನ ಸವಾರರಿಗೆ ರಸ್ತೆ ನಿಯಮಗಳನ್ನು ಪಾಲಿಸಬೇಕು ಹಾಗೂ ಎಲ್ಲೆಂದರಲ್ಲಿ ವಾಹನಗಳನ್ನು ನಿಲ್ಲಿಸುವಂತಿಲ್ಲ ಎಂಬ ಎಚ್ಚರಿಕೆಯನ್ನು ನೀಡಿದರು. ಈ ಸಂದರ್ಭದಲ್ಲಿ ಪಿಡಬ್ಲುಡಿ, ಪುರಸಭೆಯ ಅಧಿಕಾರಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka